ಸಂಪುಟ : 9 ಸಂಚಿಕೆ 302 ಪುಟ : 4+2 ಬೆಲೆ: 3.00 ಮಂಗಳವಾರ ಜನವರಿ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 302 Pages : 4+2 Price : 3.00 Tuesady January 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ; ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ದಿ.14-01-2025 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 16,21 ರಹಮತ್ ನಗರ, ಗಂಗಿ ಮಡಿ 4 ಭಾಗಗಳು ಉಳಿದ ಕೆಲವು ಭಾಗಗಳು, ವಾರ್ಡ್ ನಂ. 8,9,10 ರಲ್ಲಿ ಹೆಲ್ತ್ ಕ್ಯಾಂಪ್, ಕಬಾಡಿ ಅವರ ಲೈನ್, ತೆಗ್ಗಿನ್ ಲಾಟ್, ಪೊಲೀಸ್ ಕ್ವಾರ್ಟರ್ಸ್, ಮಜ್ಜಗಿ ಓಣಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 22ರಲ್ಲಿ ಗಂಗಿಮಡಿ , ದೊಡ್ಡ ಮಸೂತಿ, 1500 ಲೈನ್, 2000 ಲೈನ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 16 , 21ರಲ್ಲಿ ಹೊಸ ಹುಡ್ಕೋ, ಮಸೂತಿ ಲೈನ್, ಭಾಗ 1,2, ವಾರ್ಡ್ ನಂ. 11 ರಲ್ಲಿ ಇರಾನಿ ಕಾಲೋನಿ, ಕರಿಯಮ್ಮ ಕಲ್ಲು ಬಡಾವಣೆ, ಗಣಪತಿಯ ಕಟ್ಟಿ ಲೈನ್, ಪಿ ಅಂಡ್ ಟಿ ಕ್ವಾರ್ಟರ್ಸ್, ಗಾರ್ಡನ್ ಲೈನ್, ಉಳಿದ ಕೆಲವು ಭಾಗಗಳು,

ಪ್ರಕಟಣೆ :ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆ ಪ್ರಕಟಣೆಯ ಮೂಲಕ ತಿಳಿಸಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುವುದು. ಆದಕಾರಣ ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆಯು ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಸಿದೆ.

## ಬಿಲ್ ಬಾಕಿ | ಡಿಕೆಶಿ ಸೇರಿ 7 ಸಚಿವರಿಗೆ ಪತ್ರ ಬರೆದ ಗುತ್ತಿಗೆದಾರರ ಸಂಘ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘವು ರಾಜ್ಯ ಸರ್ಕಾರದ ಏಳು ಸಚಿವರಿಗೆ ಪತ್ರ ಬರೆದಿದ್ದು, ಪಾವತಿಗೆ ಬಾಕಿ ಇರುವ 32,000 ಕೋಟಿ ರೂಪಾಯಿ ತಕ್ಷಣ ಬಿಡುಗಡೆ ಮಾಡುವಂತೆ ಒತ್ತಾಯಿಸಿದೆ ಎಂದು ವರದಿಯಾಗಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಪ್ರಿಯಾಂಕ್ ಖರ್ಗೆ, ಹೆಚ್.ಸಿ. ಮಹದೇವಪ್ಪ, ಝಮೀರ್ ಅಹ್ಮದ್ ಖಾನ್, ಎನ್.ಎಸ್. ಬೋಸರಾಜು, ದಿನೇಶ್ ಗುಂಡೂರಾವ್ ಮತ್ತು ರಹೀಮ್ ಖಾನ್ ಅವರಿಗೆ ಬರೆದ ಪತ್ರದಲ್ಲಿ, ಬಾಕಿ ಪಾವತಿ ವಿಳಂಬದ ಬಗ್ಗೆ ಸಂಘವು ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಈ ಪರಿಸ್ಥಿತಿಯನ್ನು ಅನ್ಯಾಯ ಎಂದಿರುವ ಸಂಘವು, ಸಮಸ್ಯೆಯನ್ನು ತ್ವರಿತವಾಗಿ ಪರಿಹರಿಸದಿದ್ದರೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದೆ ಎಂದು ದಿ ನ್ಯೂಸ್ ಮಿನಿಟ್ ವರದಿ ಮಾಡಿದೆ. ಬಾಕಿ ಪಾವತಿಗಾಗಿ ಪದೇ ಪದೇ ವಿನಂತಿಸಿದರೂ ಅಧಿಕಾರಿಗಳು ಮತ್ತು ಸಚಿವರು ಯಾವುದೇ ಪ್ರತಿಕ್ರಿಯೆ ನೀಡುತ್ತಿಲ್ಲ.

### ಲೋಕಾಯುಕ್ತ ಅಧಿಕಾರಿಗಳ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಡಿಎಸ್‌ಪಿ ವಿಜಯ ಬಿರಾದಾರ

# ದೂರುಗಳು ಬರದಂತೆ ಕೆಲಸ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಸೋಮವಾರ ಸಾರ್ವಜನಿಕರಿಂದ ಲೋಕಾಯುಕ್ತ ಅಧಿಕಾರಿಗಳ ಅಹವಾಲು ಸ್ವೀಕಾರ ಕಾರ್ಯಕ್ರಮ ನಡೆಯಿತು.

ತಹಸೀಲ್ದಾರ ಕಚೇರಿಯಲ್ಲಿ ಆದಾಯ ಪ್ರಮಾಣಪತ್ರ ಸೇರಿ ಇತರೆ ಕೆಲ ಪ್ರಮಾಣಪತ್ರ ಪಡೆಯುವಲ್ಲಿ ವಿಳಂಬ ಮತ್ತು ಆಹಾರ ಇಲಾಖೆಯಲ್ಲಿ ಪಡಿತರ ಚೀಟಿಗಳ ದೂರುಗಳು, ರಸ್ತೆ ಅತಿಕ್ರಮಣ ಸೇರಿ ಕೆಲ ದೂರುಗಳು ಸ್ವೀಕೃತವಾದವು.

ಪಟ್ಟಣದ ಮುಖ್ಯ ಬಜಾರ್ ರಸ್ತೆಯ ಅಕ್ಕಪಕ್ಕದ ವ್ಯಾಪಾರಸ್ಥರು ರಸ್ತೆ ಅತಿಕ್ರಮಣ ಮಾಡಿಕೊಂಡಿದ್ದಾರೆ ಮತ್ತು ವ್ಯಾಪಾರ-ವಹಿವಾಟು ರಸ್ತೆಯಲ್ಲಿಯೇ ನಡೆಯುತ್ತದೆ. ಇದರಿಂದ ಸಂಚಾರಕ್ಕೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಮತ್ತು ಸರ್ಕಾರಿ ಜಾಗ ಒತ್ತುವರಿಯಾಗುತ್ತಿರುವ ಬಗೆಗಿನ ದೂರಿನ ಬಗ್ಗೆ ಪುರಸಭೆ ಶೀಘ್ರ ಕ್ರಮ ಕೈಗೊಂಡು ವರದಿ ಸಲ್ಲಿಸುವಂತೆ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಹಾಗೂ ಪೊಲೀಸರಿಗೆ



ಸೂಚಿಸಿದರು.

ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಸರ್ಕಾರಿ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳಿಗೆ ಸರಿಯಾದ ಆಹಾರ, ನೀರು ಸೇರಿದಂತೆ ಎಲ್ಲ ಸೌಲಭ್ಯಗಳ ಪೂರೈಕೆ ಮತ್ತು ಮುಖ್ಯವಾಗಿ ಕುಡಿಯುವ ನೀರನ್ನು ಲ್ಯಾಬ್‌ಗೆ ಕಳುಹಿಸಿ ಗುಣಮಟ್ಟವನ್ನು ಪರೀಕ್ಷಿಸಬೇಕು. ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಯನ್ನು ಸಹ ಮೇಲಿಂದ ಮೇಲೆ ಕೈಗೊಳ್ಳಬೇಕು. ಯಾವುದೇ ವಿಷಯದಲ್ಲಿ ಅಲಕ್ಷ್ಯ ವಹಿಸಿದ ಬಗ್ಗೆ ದೂರುಗಳು ಬರದಂತೆ ಕೆಲಸ ನಿರ್ವಹಿಸಿ ಎಂದು ಹೇಳಿದರು.

ಸಭೆಯಲ್ಲಿ ಹಾಜರಿದ್ದ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ, ವಿವಿಧ ಇಲಾಖೆಯಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಗಳ ಹಾಜರಾತಿ ಬಗ್ಗೆ ದೂರುಗಳಿದ್ದು, ಇನ್ನುಮೇಲೆ ಎಲ್ಲ ಕಚೇರಿಗಳಲ್ಲಿ ಚಲನ-ವಲನ ವಹಿ ಮತ್ತು ಹಾಜರಾತಿ ವಹಿ ಕಟ್ಟುನಿಟ್ಟಾಗಿ ಪಾಲಿಸಬೇಕು.

ಕೆಲವು ಇಲಾಖೆಯವರು ತಮ್ಮ ಕೆಲಸದ ವೇಳೆಯಲ್ಲಿ ಹೊರಗಡೆ ಖಾಸಗಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿರುವ ಬಗ್ಗೆಯೂ ದೂರುಗಳಿವೆ. ಅವುಗಳು ಸರಿಯಾಗುವಂತೆ ಮಾಡುವದು ಅಧಿಕಾರಿಗಳ ಕರ್ತವ್ಯವಾಗಿದೆ. ಸಿಬ್ಬಂದಿಗಳು ಕೆಲಸದ ಅವಧಿಯಲ್ಲಿ ಬೇರೆ ಬೇರೆ ಕಾರ್ಯದಲ್ಲಿ ತೊಡಗಿಸಿಕೊಳ್ಳುವದನ್ನು ನಿರ್ಬಂಧಿಸಿ ಇಂತಹ ದೂರುಗಳು ಬರದಂತೆ ಎಚ್ಚರಿಕೆ ವಹಿಸಿ ಎಂದು ಸೂಚಿಸಿದರು.

ಈ ವೇಳೆ ತಹಸೀಲ್ದಾರ ವಾಸುದೇವ ಸ್ವಾಮಿ, ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಆರೋಗ್ಯ, ಆಹಾರ, ಸಾರಿಗೆ, ಕೃಷಿ, ತೋಟಗಾರಿಕೆ, ಪೊಲೀಸ್, ಶಿಕ್ಷಣ, ಸಮಾಜ ಕಲ್ಯಾಣ, ಪುರಸಭೆ, ಹೆಸ್ಕಾಂ, ಖಜಾನೆ, ಉಪನೋಂದಣಾಧಿಕಾರಿ ಸೇರಿದಂತೆ ಎಲ್ಲ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

> ಇಲಾಖೆ ಅಧಿಕಾರಿಗಳಿಗೆ ನೀಡಲಾಗಿರುವ ವಾಹನಗಳನ್ನು ಅವರು ಕೆಲಸ ನಿರ್ವಹಿಸುವ ಕೇಂದ್ರದಲ್ಲಿ ಮಾತ್ರ ಉಪಯೋಗಿಸಬೇಕು. ಬೇರೆ ಬೇರೆ ಊರುಗಳಿಗೆ ತೆರಳಲು ಸರ್ಕಾರಿ ವಾಹನಗಳನ್ನು ಉಪಯೋಗಿಸುವಂತಿಲ್ಲ. ಇವುಗಳು ಕಂಡುಬಂದರೆ ಕ್ರಮ ಕೈಗೊಳ್ಳಲಾಗುವದು ಎಂದು ಹೇಳಿದರಲ್ಲದೆ, ಇಂದು ಸ್ವೀಕರಿಸಿದ ದೂರುಗಳ ಬಗ್ಗೆ ಶೀಘ್ರವೇ ಕ್ರಮ ಕೈಗೊಳ್ಳಲಾಗುತ್ತದೆ ಎಂದು ವಿಜಯ ಬಿರಾದಾರ ಹೇಳಿದರು.

### ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಶಾಸಕ ಸಿ.ಸಿ. ಪಾಟೀಲ ಅಸಮಾಧಾನ

# ಕಾಂಗ್ರೆಸ್ ಸರ್ಕಾರದಿಂದ ಚಾಣಾಕ್ಷ ನಡೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಂತರಾಜು ಆಯೋಗದ ವರದಿಯ ಕುರಿತು ಪಂಚಮಸಾಲಿ ಸಮಾಜ ಮಾತ್ರವಲ್ಲದೇ ಒಕ್ಕಲಿಗರೂ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸಮೀಕ್ಷೆ ವೈಜ್ಞಾನಿಕವಾಗಿ ನಡೆದಿಲ್ಲ ಎನ್ನುವುದಕ್ಕೆ ಹಲವಾರು ಅಂಶಗಳು ಕಂಡುಬಂದಿವೆ. ಈ ವರದಿಯನ್ನು ಒಪ್ಪಿಕೊಂಡರೆ ಲಕ್ಷಾಂತರ ಸಂಖ್ಯೆಯಲ್ಲಿರುವ ವೀರಶೈವ ಲಿಂಗಾಯತರಿಗೆ ಅನ್ಯಾಯವಾಗಲಿದೆ. ಇದಕ್ಕೆ ಎಲ್ಲ ಪಕ್ಷಗಳ ವರಿಷ್ಠರಿಂದ ವಿರೋಧ ವ್ಯಕ್ತವಾಗಿದೆ. ಹೀಗಾಗಿ ಕಾಂತರಾಜು ಆಯೋಗದ ವರದಿಯನ್ನು ತಿರಸ್ಕರಿಸಿ, ಕೇಂದ್ರ ಸರಕಾರವೂ ಜಾತಿ ಜನಗಣತಿ ನಡೆಸುತ್ತಿದ್ದು, ಅದನ್ನು ಆಧರಿಸಿ ರಾಜ್ಯ ಸರಕಾರವೂ ಜಾತಿ ಜನಗಣತಿಗೆ ಮುಂದಾಗಬೇಕು ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಲ್ಲಿನ ಒಳಜಗಳದ ಕಾರಣದಿಂದ ಎದುರಾಗಿರುವ ಆಡಳಿತ ವೈಫಲ್ಯವನ್ನು ಮರೆಮಾಚಲು ಜಾತಿ ಜನಗಣತಿ ವರದಿ ಜಾರಿ ವಿಷಯವನ್ನು ಮುನ್ನಲೆಗೆ




ತರುವ ಮೂಲಕ ಕಾಂಗ್ರೆಸ್ ಚಾಣಾಕ್ಷ ನಡೆಯನ್ನು ಅನುಸರಿಸುತ್ತಿದೆ. ಜಾತಿ ಜನಗಣತಿ ಆಧಾರದಲ್ಲಿ ಹಿಂದುಳಿದ ಸಮುದಾಯಗಳಿಗೆ ಸರಕಾರದ ಸೌಲಭ್ಯಗಳು ಸಿಗಬೇಕು. ಆದರೆ ಕಾಂತರಾಜು ಆಯೋಗದ ವರದಿ ಅವೈಜ್ಞಾನಿಕವಾಗಿದೆ ಎನ್ನುವ ಆರೋಪಗಳ ನಡುವೆಯೂ ಅದನ್ನೇ ಯಥಾವತ್ತಾಗಿ ಜಾರಿ ಮಾಡುವ ವಿಷಯ ಮುನ್ನಲೆಗೆ ತರುತ್ತಿರುವುದು ಸೂಕ್ತವಲ್ಲ ಎಂದರು.

ಕಾಂಗ್ರೆಸ್ ಪಕ್ಷದ ಸಚಿವರು, ಶಾಸಕರು ತಮ್ಮ ಕುರ್ಚಿಯ ಆಸೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಕ್ಕೆ ಒಪ್ಪಿಕೊಳ್ಳದೆ ಆತ್ಮಸಾಕ್ಷಿಗೆ ಅನುಗುಣವಾಗಿ ನಿರ್ಧಾರ ಕೈಗೊಳ್ಳಬೇಕು. ವಿಶೇಷವಾಗಿ ಲಿಂಗಾಯತ ಮತ್ತು ಒಕ್ಕಲಿಗ ಸಚಿವರು, ಶಾಸಕರು ಈ ವಿಷಯದಲ್ಲಿ ಬದ್ಧತೆ ಪ್ರದರ್ಶಿಸಬೇಕು ಎಂದು ಒತ್ತಾಯಿಸಿದರು.

ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಅವರು ಗುತ್ತಿಗೆದಾರರಿಗೆ ಹಿಂದಿನ ಸರಕಾರ ಕೆಲಸ ಕೊಟ್ಟಿದೆ ಎನ್ನುತ್ತಾರೆ. ತಮ್ಮ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ ನಡೆದಾಗ ಸರಕಾರದಲ್ಲಿ ಅನುದಾನ ಇದೆಯೋ ಇಲ್ಲವೋ ಎನ್ನುವುದನ್ನು ಕೇಳಬಹುದಿತ್ತು. ಅದನ್ನು ಬಿಟ್ಟು ಎರಡು ವರ್ಷದ ನಂತರ ಹಿಂದಿನ ಸರಕಾರದ ಮೇಲೆ ಆರೋಪ ಮಾಡುವುದು ಸರಿಯಲ್ಲ. ಅಷ್ಟಕ್ಕೂ ರಾಜ್ಯದ ತೆರಿಗೆ ಹಣ ಹೋಗಿದ್ದೆಲ್ಲಿಗೆ? ಬಿಬಿಎಂಪಿ ಹೊರತುಪಡಿಸಿ 32 ಸಾವಿರ ಕೋಟಿ ರೂ. ಬಾಕಿ ಇದೆ. ಯಾವ ಉದ್ದೇಶಕ್ಕೆ ಬಿಲ್ ಬಾಕಿ ಉಳಿಸಿಕೊಂಡಿದ್ದಾರೆ ಎನ್ನುವುದನ್ನು ಸ್ಪಷ್ಟಪಡಿಸಲಿ ಎಂದು ಸವಾಲು ಹಾಕಿದರು.

> ಪತ್ರಕರ್ತರ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಶಾಸಕ ಸಿ.ಸಿ. ಪಾಟೀಲ, ಕೂಡಲ ಸಂಗಮ ಪೀಠದ ಜಯಮೃತ್ಯುಂಜಯ ಸ್ವಾಮೀಜಿ ಹಾಗೂ ಹರಿಹರ ಪೀಠದ ಬಗ್ಗೆ ಅಪಾರ ಗೌರವವಿದೆ. ಆದರೆ ಪಂಚಮಸಾಲಿ ಸಮಾಜದ ಮೇಲೆ ಲಾಠಿ ಚಾರ್ಜ್ ಮಾಡಿದ ಸಿದ್ದರಾಮಯ್ಯ ಅವರನ್ನು ಹರಜಾತ್ರೆಗೆ ಆಹ್ವಾನಿಸಿದ್ದು ಸರಿಯಲ್ಲ ಎನ್ನುವುದು ನನ್ನ ಭಾವನೆ ಎಂದು ಹೇಳಿದರು.

▶▶ 3ನೇ ಪುಟಕ್ಕೆ

### ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

## ಜಕ್ಕಲಿ ಗ್ರಾಮ ಇತಿಹಾಸದ ಪುಟ ಸೇರಲಿದೆ



■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಜಕ್ಕಲಿ ಗ್ರಾಮದ ತನ್ನದೇ ಆದ ಇತಿಹಾಸವನ್ನು ಹೊಂದಿದ್ದು, ಈಗ ದಿ. ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ಭವನ ನಿರ್ಮಾಣದಿಂದ ಇತಿಹಾಸದ ಪುಟ ಸೇರಲಿದೆ ಎಂದು ರಾಜ್ಯ ಖನಿಜ ಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಜಕ್ಕಲಿ ಗ್ರಾಮದಲ್ಲಿ 35 ಲಕ್ಷ ರೂ.ಗಳ ಅಭಿವೃದ್ಧಿ ಕಾರ್ಯ, ವಿವೇಕ ಯೋಜನೆಯಡಿಯಲ್ಲಿ ನಿರ್ಮಾಣಗೊಂಡ ಎರಡು ಶಾಲಾ ಕೊಠಡಿ ಹಾಗೂ ಬಿಸಿಊಟ ಕೋಣೆಯನ್ನು ಉದ್ಘಾಟಿಸಿ ಮಾತನಾಡಿದರು.

ದೇಶಕ್ಕೆ, ನಾಡಿಗೆ ದಿ. ಅಂದಾನಪ್ಪ ದೊಡ್ಡಮೇಟಿಯವರ ಕೊಡುಗೆ ಅನನ್ಯವಾಗಿದೆ. ಅವರ ಹೋರಾಟ ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಮುಂದಿನ ಪೀಳಿಗೆಗೆ ಜಕ್ಕಲಿ ಗ್ರಾಮದ ಇತಿಹಾಸವನ್ನು ಸಾರುವ ದೃಷ್ಟಿಯಿಂದ ಎರಡು ಎಕರೆ ಪ್ರದೇಶದಲ್ಲಿ 10 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಮಾರಕ ಭವನವನ್ನು ನಿರ್ಮಿಸಲು ಈಗಾಗಲೇ ಕಾರ್ಯ ನಡೆದಿದ್ದು, ಸರಕಾರ ಮೊದಲ ಹಂತದಲ್ಲಿ 3 ಕೋಟಿ ರೂಗಳನ್ನು ಬಿಡುಗಡೆ ಮಾಡಿದೆ ಎಂದರು.

ಸ್ಮಾರಕ ಭವನ ನಿರ್ಮಾಣದಿಂದ ಜಕ್ಕಲಿ ಗ್ರಾಮ ಮತ್ತಷ್ಟು ಎತ್ತರಕ್ಕೆ ಬೆಳೆಯುವುದರಲ್ಲಿ ಸಂಶಯವಿಲ್ಲ. ಕಾರಣ, ಅದೊಂದು ಪ್ರವಾಸಿ ತಾಣವಾಗಲಿದ್ದು, ಇದರಿಂದ ಗ್ರಾಮದ ಬೆಳವಣಿಗೆಗೆ ಸಹಕಾರಿಯಾಗಲಿದೆ. ಗ್ರಾಮದ ಸಮಗ್ರ ಅಭಿವೃದ್ಧಿಗೆ ಮತ್ತಷ್ಟು ಅನುದಾನವನ್ನು ನೀಡಲಾಗುವುದು. ಮುಖ್ಯವಾಗಿ ಗ್ರಾಮಸ್ಥರು ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು ಎಂದರು.

ಸಂಗನಗೌಡ ಪಾಟೀಲ, ಮಲ್ಲಣ್ಣ ಮೇಟಿ, ರಮೇಶ ಪಲ್ಲೇದ, ಯೂಸುಫ್ ಇಟಗಿ, ಬಸವರಾಜ ನವಲಗುಂದ, ರಾಜು ಮುಗುಳಿ, ಮುತ್ತು ಮೇಟಿ, ಅಂದಾನೇಶ ದೊಡ್ಡಮೇಟಿ, ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಮುಖಂಡರು ಅಧಿಕಾರಿಗಳು, ಗ್ರಾಮಸ್ಥರಿದ್ದರು.

### ಕೇರಳ-ಚಿಕ್ಕಮಂಗಳೂರಿನ ದಂಪತಿಗಳಿಗೆ ಗದುಗಿನ ದತ್ತು ಮಗುವನ್ನು ಹಸ್ತಾಂತರಿಸಿದ ಸಚಿವ ಎಚ್.ಕೆ.ಪಾಟೀಲ

## ಮಕ್ಕಳಿಗಿಂತ ದೊಡ್ಡ ಸಂಪತ್ತು ಇನ್ನೊಂದಿಲ್ಲ




■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಗಿಂತ ದೊಡ್ಡ ಸಂಪತ್ತು ಇಲ್ಲ. ಮಕ್ಕಳ ಮೂಲಕ ಭಗವಂತನ ಸೇವೆ ಮಾಡುವ, ಭಗವಂತನನ್ನು ಕಾಣಲು ತನ್ನನ್ನ ಸಮರ್ಪಿಸಿಕೊಂಡಿರುವ ಸೇವಾ ಭಾರತಿಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ರವಿವಾರ ಬೆಟಗೇರಿಯ ಹೆಲ್ತ್‌ಕ್ಯಾಂಪ್‌ನಲ್ಲಿರುವ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಒಂದು ಗಂಡು ಹಾಗೂ ಒಂದು ಹೆಣ್ಣು ಮಗುವನ್ನು ಕೇರಳ (ವಕ್ಕಡಪುರಂ) ಹಾಗೂ ಚಿಕ್ಕಮಂಗಳೂರಿನ (ಮೇಗೂರ) ಮಕ್ಕಳಿಲ್ಲದ ದಂಪತಿಗಳಿಗೆ ಕಾನೂನಿನ ಚೌಕಟ್ಟಿನಡಿ ದತ್ತು ಮಗವನ್ನಾಗಿ ಹಸ್ತಾಂತರಿಸಿ ಮಾತನಾಡಿದರು.

ಮಗು ಎಲ್ಲಿ ಜನಸಿದೆ ಎಂಬುದು ಮುಖ್ಯವಲ್ಲ. ದತ್ತು ಪಡೆದ ಪೋಷಕರ ಮಡಿಲಿಗೆ ಮಗುವನ್ನು ಹಾಕಿದ ನಂತರ ಇಂದಿಗೆ ಮಗುವಿಗೆ ಪುನರ್ಜನ್ಮ ಸಿಕ್ಕಂತಾಯಿತು. ಮಕ್ಕಳನ್ನು ಬೆಳೆಸಿ, ದೇಶದ ಉತ್ತಮ ನಾಗರಿಕರನ್ನಾಗಿ ಮಾಡುವ ಹೊಣೆಗಾರಿಕೆ ದತ್ತು ಪಡೆದವರ ಮೇಲಿದೆ.

> ಮುಖ್ಯ ಅತಿಥಿಯಾಗಿ ಆಗಮಿಸಿದ್ದ ವೈದ್ಯ ಡಾ. ಎಸ್.ಬಿ. ಶೆಟ್ಟರ ಮಾತನಾಡಿ, ಇದೊಂದು ಮನ ಕಲಕುವ, ಮನಕ್ಕೆ ಮುದ ನೀಡುವ ಕಾರ್ಯಕ್ರಮವಾಗಿದೆ. ಈ ಸಂಸ್ಥೆ ನಿಷ್ಕಾಮವಾಗಿ ಕೆಲಸ ಮಾಡುತ್ತಿದೆ. ಈ ಸೇವೆಯಲ್ಲಿ ಯಾವುದೇ ಪ್ರತಿಫಲಾಪೇಕ್ಷೆ ಇರುವುದಿಲ್ಲ. ಸಮಾಜದ ಸಮಸ್ಯೆಗೆ ಉತ್ತರವು ಹೌದು, ಮಗು ಅನಾಥವಾಗಬಾರದು ಅಂತಹ ಮಗುವಿಗೆ ಸೂರು ಕಲ್ಪಿಸುವದು ಸಮಾಜದ ಜವಾಬ್ದಾರಿಯೂ ಹೌದು. ಇಂತಹ ಅಮೂಲ್ಯ ಸೇವೆಗೆ ಮುಂದಾಗಿರುವ ಸೇವಾ ಭಾರತಿ ಸಂಸ್ಥೆಯ ಕಾರ್ಯ ಅಭಿನಂದನೀಯ ಎಂದರು.

> ಕೆಲವು ದಂಪತಿಗಳು ಮಕ್ಕಳಿಲ್ಲದೇ ಕೊರಗುತ್ತಿದ್ದಾರೆ. ಮಗುವನ್ನು ಪಡೆದ ಪೋಷಕರು ಪುಣ್ಯವಂತರು. ದತ್ತು ಪಡೆದ ಪೋಷಕರು ಮಕ್ಕಳನ್ನು ಸಾಕುವ, ಶಿಕ್ಷಣ ಕೊಡಿಸುವ, ಉತ್ತಮ ನಾಗರಿಕರನ್ನಾಗಿ ಮಾಡುವ ಅರ್ಹತೆ ಇದೆಯೇ ಎಂಬುದಕ್ಕಾಗಿ ಈ ನಿಯಮಗಳಿವೆ. ಸಮಾಜ ದೃಷ್ಟಿಯಿಂದ ಈ ನಿಯಮಗಳು ಮಗುವಿನ ಭವಿಷ್ಯದ ಹಿತದೃಷ್ಟಿಯಿಂದ ಅವಶ್ಯವಾಗಿದೆ. ದತ್ತು ನೀಡುವ ಮತ್ತು ಪಡೆದುಕೊಳ್ಳುವಲ್ಲಿ ಹಲವಾರು ನಿಯಮಗಳು, ಕಾನೂನಿನ ಚೌಕಟ್ಟುಗಳಿವೆ. ಅವುಗಳನ್ನು ಪರಿಪಾಲಿಸುವದು ಅನಿವಾರ್ಯ.
>
> **– ಎಚ್.ಕೆ. ಪಾಟೀಲ. ಸಚಿವರು.**

▶▶ 3ನೇ ಪುಟಕ್ಕೆ

### ಬಿಂಕದಕಟ್ಟಿಯಲ್ಲಿ ಸಹಕಾರ ರತ್ನ ಎಂ.ವಿ. ಮೂಲಿಮನಿಯವರ ಜಯಂತ್ಯುತ್ಸವ ಆಚರಣೆ

## ಮೂಲಿಮನಿಯವರ ಕನಸು ನನಸಾಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಭಿನ್ನ ಆಲೋಚನೆ, ವಿಭಿನ್ನ ಚಿಂತನೆ ಹೊಂದಿದ್ದ ಸಹಕಾರ ರತ್ನ ಎಂ.ವಿ. ಮೂಲಿಮನಿ ಅವರು ನಾಲ್ಕೈದು ದಶಕಗಳ ಹಿಂದೆಯೇ ಗ್ರಾಮಗಳಲ್ಲಿ ಶೌಚಾಲಯಗಳ ನಿರ್ಮಾಣದ ಕನಸನ್ನು ಹೊಂದಿದ್ದರು. ಅವರ ಆಲೋಚನೆ ಮತ್ತು ದೂರದೃಷ್ಟಿ ಇಂದು ಸರಕಾರ ಉದ್ದೇಶಗಳಾಗಿ ರೂಪುಗೊಂಡಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ತಾಲೂಕಿನ ಬಿಂಕದಕಟ್ಟಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಸಹಕಾರಿ ಸಂಘದ ವತಿಯಿಂದ ಸಹಕಾರ ರತ್ನ ಎಂ.ವಿ. ಮೂಲಿಮನಿ ಅವರ 94ನೇ ಜಯಂತ್ಯುತ್ಸವ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 67ನೇ ವಾರ್ಷಿಕ ಹಾಗೂ ಹಾಲು ಉತ್ಪಾದಕರ ಸಹಕಾರಿ ಸಂಘದ ರಜತ ಮಹೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒಂದು ವ್ಯಕ್ತಿತ್ವವನ್ನು ಬೇರೆ ಬೇರೆ ಕಾರಣಗಳಿಗೆ ನೋಡುವುದೇ ಒಂದು ವಿಭಿನ್ನ ಅನುಭವ. ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವ ವ್ಯಕ್ತಿತ್ವ ಹೊಂದಿದ್ದ ಎಂ.ವಿ. ಮೂಲಿಮನಿ ಅವರು ಗ್ರಾಮೀಣ ಭಾಗಕ್ಕೆ ಶುದ್ಧ ಕುಡಿಯುವ ನೀರು ಘಟಕ, ಶಿಶುವಿಹಾರ, ಅಂಗನವಾಡಿಗಳು ಇರಬೇಕು ಎಂಬುದು ಅವರ ಆಲೋಚನೆಗಳಲ್ಲಿ ಒಂದಾಗಿದ್ದವು. ಅವರ ಆಲೋಚನಾ ಪ್ರಕ್ರಿಯೆಗಳು ಪುಸ್ತಕ ರೂಪದಲ್ಲಿ ಹೊರಬಂದು ಯುವಕರಿಗೆ ಮಾದರಿಯಾಗಬೇಕಿದೆ ಎಂದು ಹೇಳಿದರು.

> ರೋಣ ಶಾಸಕ ಜಿ.ಎಸ್. ಪಾಟೀಲ ಉಗ್ರಾಣವನ್ನು ಉದ್ಘಾಟಿಸಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸರಕಾರದ ಯಾವುದೇ ಅಭಿವೃದ್ಧಿ ಪರ ಯೋಜನೆಗಳು ಜಾರಿಯಾದರೆ ಅಂತಹ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸುವಲ್ಲಿ ಬಿಂಕದಕಟ್ಟಿ ಗ್ರಾಮ ಮೊದಲ ಸ್ಥಾನದಲ್ಲಿ ನಿಲ್ಲುತ್ತದೆ. ಅಲ್ಲದೇ, ಗ್ರಾಮದಲ್ಲಿ ಕೈಗೊಳ್ಳುವ ಅಭಿವೃದ್ಧಿ ಯೋಜನೆಗಳಿಗೆ ಖನಿಜ ಅಭಿವೃದ್ಧಿ ನಿಗಮ ವತಿಯಿಂದ 20 ಲಕ್ಷ ರೂ. ಅನುದಾನ ನೀಡುವುದಾಗಿ ಭರವಸೆ ನೀಡಿದರು.

▶▶ 3ನೇ ಪುಟಕ್ಕೆ



## ಸಂಪಾದಕೀಯ

# ಜಾತಿ ಜನಗಣತಿ ವರದಿ ಬಹಿರಂಗವಾಗಲಿ

ರಾಜ್ಯದಲ್ಲಿ ಈಗ ಜಾತಿ ಜನಗಣತಿ ವರದಿ ಜಾರಿಯದ್ದೆ ಬಹುದೊಡ್ಡ ಚರ್ಚೆ. ಇದೇ ಜನವರಿ 16ರಂದು ನಡೆಯುವ ಸಚಿವ ಸಂಪುಟದಲ್ಲಿ ವರದಿ ಮಂಡನೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿರುವ ಹೇಳಿಕೆ, ರಾಜ್ಯದಲ್ಲಿ ಸಂಚಲನ ಸೃಷ್ಟಿಸಿದೆ.

ಆಡಳಿತ ಮತ್ತು ಪ್ರತಿಪಕ್ಷದ ಮೇಲ್ವರ್ಗದ ಅನೇಕ ಸಚಿವರು, ಶಾಸಕರು ಈಗಾಗಲೇ ಕಾಂತರಾಜು ಆಯೋಗದ ವರದಿ ಜಾರಿಗೆ ವಿರೋಧ ವ್ಯಕ್ತಪಡಿಸಿದ್ದಾರೆ. ಉತ್ತರ ಕರ್ನಾಟಕ ಭಾಗದಲ್ಲಿ ವೀರಶೈವ ಲಿಂಗಾಯತ ಮತ್ತು ದಕ್ಷಿಣ ಕರ್ನಾಟಕ ಭಾಗದಲ್ಲಿ ಒಕ್ಕಲಿಗ ಸಮುದಾಯದ ಜನಪ್ರತಿನಿಧಿಗಳು ಕಾಂತರಾಜು ಆಯೋಗ ವರದಿ ಜಾರಿ ಮಾಡುವುದಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ.

ಆದರೆ ಈ ಹಿಂದಿನ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ರಚನೆಯಾದ ಆಯೋಗ, 160 ಕೋಟಿ ರೂ.ವ್ಯಯಿಸಿ ವರದಿ ಸಿದ್ಧಪಡಿಸಿದೆ. ಹೀಗಾಗಿ ಸಾರಾಸಗಟಾಗಿ ವರದಿಯನ್ನು ಸರಕಾರ ತಿರಸ್ಕರಿಸಲು ಸಾಧ್ಯವಿಲ್ಲ, ವರದಿಯ ಅಂಶಗಳನ್ನು ಆಧರಿಸಿ ಮತ್ತಷ್ಟು ಬದಲಾವಣೆ ಮಾಡಲು ಅವಕಾಶವಿದೆ. ಆದರೆ ವರದಿಯಲ್ಲಿ ಏನಿದೆ ಎನ್ನುವುದೇ ಯಕ್ಷ ಪ್ರಶ್ನೆಯಾಗಿದೆ.

ದಶಕಗಳ ಹಿಂದೆ ರಚನೆಯಾದ ಆಯೋಗ ನೀಡಿದ ವರದಿಯ ಕೆಲ ಅಂಶಗಳು ಸೋರಿಕೆಯಾಗಿರುವ ಅನುಮಾನಗಳಿವೆ. ಆ ಕಾರಣಕ್ಕಾಗಿಯೇ ಸರಕಾರದಲ್ಲಿರುವ ಮಂತ್ರಿಗಳು, ಪ್ರತಿಪಕ್ಷದಲ್ಲಿರುವ ಕೆಲ ಮುಖಂಡರು ಕಾಂತರಾಜು ಆಯೋಗದ ವರದಿ ಬಗ್ಗೆ ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ ಎನ್ನುವ ಚರ್ಚೆ ಶುರುವಾಗಿದೆ. ವಾಸ್ತವದಲ್ಲಿ ವರದಿ ಸೋರಿಕೆ ಆಗಿರಬಹುದು. ಅಥವಾ ಕಪೋಲಕಲ್ಪಿತವೂ ಇರುವ ಸಾಧ್ಯತೆಯೂ ಇದೆ.

ಈ ಎಲ್ಲ ಅಂಶಗಳನ್ನು ಗಮನಿಸಿದಲ್ಲಿ, ಜನವರಿ 16ರಂದು ಸಚಿವ ಸಂಪುಟದ ಮುಂದೆ ವರದಿ ಮಂಡನೆಯಾಗಲಿ. ಆ ವರದಿ ಸಾರ್ವಜನಿಕರಿಗೆ ಮುಕ್ತವಾಗಿ ದೊರೆಯುವಂತೆ ಅಥವಾ ವರದಿಯ ಮುಖ್ಯಾಂಶಗಳನ್ನು ಸರಕಾರವೇ ಮುಂದಿಡುವ ಪ್ರಯತ್ನ ಮಾಡಲಿ. ಮುಖ್ಯಮಂತ್ರಿ ಸಿದ್ದರಾಮಯ್ಯ ತತಕ್ಷಣ ವರದಿ ಜಾರಿಯ ಬಗ್ಗೆ ಮಾತನಾಡವುದಕ್ಕಿಂತ ವರದಿಯನ್ನು ಬಹಿರಂಗಪಡಿಸುವ ಬಗ್ಗೆ ಚಿಂತನೆ ನಡೆಸಲಿ. ರಾಜ್ಯದ ಪ್ರತಿಯೊಬ್ಬರೂ ಆ ವರದಿಯನ್ನು ನೋಡಿ, ಅಧ್ಯಯನ ಮಾಡಿ ಒಂದು ಜನಾಭಿಪ್ರಾಯ ರೂಪಗೊಳ್ಳಲು ಅವಕಾಶ ಮಾಡಿಕೊಟ್ಟಲ್ಲಿ, ಭವಿಷ್ಯದಲ್ಲಿ ಜಾತಿ ಜನಗಣತಿ ಆಧಾರಿತ ಕಾರ್ಯಕ್ರಮಗಳು ಸಮರ್ಪಕ ಮತ್ತು ಪರಿಣಾಮಕಾರಿಯಾಗಿ ಜಾರಿಯಾಗಲು ಸಾಧ.

# ಸಹಕಾರ ಸಂಘದ ಅಧ್ಯಕ್ಷರಾಗಿ ಕೃಷ್ಣರಡ್ಡಿ ಮಾಡೊಳ್ಳಿ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ



ತಾಲೂಕಿನ ಶಿಶ್ವಿನಹಳ್ಳಿ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಸಹಕಾರ ಸಂಘದ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನ ಸೇರಿದಂತೆ ಐದು ವರ್ಷಗಳ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ ಎಲ್ಲಾ ಸ್ಥಾನಗಳಿಗೂ ಅವಿರೋಧ ಆಯ್ಕೆ ನಡೆದಿದೆ ಎಂದು ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಧ್ಯಕ್ಷರಾಗಿ ಕೃಷ್ಣರಡ್ಡಿ ಎಚ್ ಮಾಡೊಳ್ಳಿ ಹಾಗೂ ಉಪಾಧ್ಯಕ್ಷರಾಗಿ ರಮೇಶ್ ಎಮ್ ಹೆಬ್ಬಳ್ಳಿ ಅವಿರೋಧ ಆಯ್ಕೆಯಾಗಿದ್ದಾರೆ.

ಸದಸ್ಯರಾಗಿ ಎಸ್. ಜಿ ಬೂದಿಹಾಳ, ಎನ್. ಕೆ ಬಣ್ಣದನೂಲಮಠ, ಆಯ್. ಕೆ ಕುಲಕರ್ಣಿ, ವಿ.ಎಸ್ ಬಣ್ಣದನೂಲಮಠ, ಡಿ.ಎಸ್ ಕಮತರ, ಡಿ. ಆರ್ ಕೌಜಗೇರಿ, ಡಿ.ಬಿ ಕಡೆಮನಿ, ಹೆಚ್. ಆರ್ ದೊಡಮನಿ, ಶ್ರೀಮತಿ ಎ.ಜಿ ಹಿರೇಮಠ ಹಾಗೂ ಶ್ರೀಮತಿ ವಾಯ್.ಟಿ ಮೊರಬರಡ್ಡಿ ಅವಿರೋಧ ಆಯ್ಕೆಯಾಗಿದ್ದಾರೆ. ಚುನಾವಣಾಧಿಕಾರಿಯಾಗಿ ಶ್ರೀಮತಿ ಶ್ರೀದೇವಿ ಕುಲಕರ್ಣಿ ಕಾರ್ಯನಿರ್ವಹಿಸಿದರು ಎಂದು ಮುಖಾನಿ ಬಿ.ಜಿ ಕಿರೇಸೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಕ್ರಾಂತಿ ಹಬ್ಬದ ಆಚರಣೆಯ ಕುರಿತು ವಿಶೇಷ ಲೇಖನ

# ಹೊಸ ವರ್ಷದ ಮೊದಲ ಹಬ್ಬ ಸಂಕ್ರಾಂತಿ

ಹೊಸ ವರ್ಷದ ಆರಂಭದಲ್ಲಿ ಬರುವ ಮೊದಲ ಹಬ್ಬ ಸಂಕ್ರಾಂತಿ. ಮಕರ ಸಂಕ್ರಾಂತಿಯನ್ನು ಸಂಭ್ರಮದಿಂದ ಆಚರಿಸುತ್ತಾರೆ. ಆದರೆ ದಕ್ಷಿಣ ಭಾರತದಲ್ಲಿ ಇದರ ಸಂಭ್ರಮ ಇನ್ನೂ ಹೆಚ್ಚು. ತಮ್ಮದೇ ಆದ ರೀತಿಯಲ್ಲಿ, ಪದ್ಧತಿಯಲ್ಲಿ ನಡೆಯುವ ಹಬ್ಬದ ಸಿದ್ಧತೆಗಳು ಆಕರ್ಷಕ. ಅಕ್ಕ ಪಕ್ಕದ ಮನೆಯ ಹೆಂಗಸರು ಒಬ್ಬರನ್ನೊಬ್ಬರು ಕೇಳುತ್ತಾ... ಹಬ್ಬಕ್ಕೆ ಸಿದ್ಧವಾಗುತ್ತಾರೆ. ಎಳ್ಳು-ಬೆಲ್ಲಕ್ಕೆ ಬೇಕೆಂದು ಕಡಲೆಕಾಯಿ ಸುಲಿಯೋದು, ಕೊಬ್ಬರಿ ಕಾಯಿ ಸಣ್ಣದಾಗಿ ಹಚ್ಚೋದು, ಸಕ್ಕರೆ ಅಚ್ಚುಗಳನ್ನು ಮಾಡುವುದು, ಬಿಳಿ ಎಳ್ಳನ್ನು ಹುರಿದು ಅದಕ್ಕೆ ಕಡಲೆ ಬೀಜ, ಕೊಬ್ಬರಿ, ಸಕ್ಕರೆ ಅಚ್ಚುಗಳನ್ನು ಸೇರಿಸಿ ಪ್ಯಾಕೆಟ್ ಮಾಡುವುದು, ಹಬ್ಬದ ದಿನ ಬೆಳಿಗ್ಗೆ ಎದ್ದು, ಮನೆಯಂಗಳದಲ್ಲಿ ಪೊಂಗಲ್ ಉಕ್ಕುತ್ತಿರುವ ರಂಗೋಲಿ ಮತ್ತು ಕಬ್ಬುಗಳ ಚಿತ್ರಗಳ ರಂಗೋಲಿ ಬಿಡಿಸಿ ಬಣ್ಣ ಮತ್ತು ಹೂಗಳಿಂದ ಅಲಂಕಾರ ಮಾಡುತ್ತಾರೆ.

ಮನೆಯ ಹೊಸ್ತಿಲು ಮತ್ತು ದೇವರ ಕೋಣೆಯನ್ನು ಮಾವಿನ ತಳಿರು-ತೋರಣಗಳು



ಮತ್ತು ಕಬ್ಬು, ಹೂವುಗಳಿಂದ ಅಲಂಕರಿಸುತ್ತಾರೆ. ಮನೆಯಲ್ಲಿ ಪೂಜೆ ಪುನಸ್ಕಾರ ಮುಗಿಸಿ ಊಟ ಮಾಡುವ ಹೊತ್ತಿಗೆ ಮಧ್ಯಾಹ್ನ ಆಗುತ್ತದೆ. ಸಂಜೆ ವೇಳೆಗೆ ದೇವಸ್ಥಾನಕ್ಕೆ ಹೋಗಿ ಬರುತ್ತಾರೆ. ಅಕ್ಕ ಪಕ್ಕದ ಮನೆಗಳಿಗೆ ಕಬ್ಬು, ಗೆಣಸು, ಅವರೇಕಾಯಿ, ಎಳ್ಳು-ಬೆಲ್ಲ ಕೊಡುವುದರ ಮೂಲಕ ಸಂಕ್ರಾಂತಿ ಹಬ್ಬದ ಶುಭಾಶಯಗಳನ್ನು ಹೇಳುತ್ತಾರೆ.

ತಮಿಳುನಾಡಿನಲ್ಲಿ ಪೊಂಗಲ್, ಸುಗ್ಗಿ ಹಬ್ಬವೆಂದೂ ಸಂಕ್ರಾಂತಿಯನ್ನು ಕರೆಯುತ್ತಾರೆ. ಮಡಿಕೆಯಲ್ಲಿ ಅಕ್ಕಿ, ಬೇಳೆಯನ್ನು ಬೇಯಿಸಿ ಮಾಡುವ ಪೊಂಗಲ್ ಹಬ್ಬದ ವಿಶೇಷ. ಹೊಸ ಬಟ್ಟೆ ತೊಟ್ಟು ಬಂಧು ಮಿತ್ರರು ಮತ್ತು ಸ್ನೇಹಿತರಿಗೆ ಸಂಕ್ರಾಂತಿಯ ಶುಭಾಶಯ ಹೇಳಿ ಕಬ್ಬು, ಎಳ್ಳು-ಬೆಲ್ಲಗಳ ವಿನಿಮಯ ಮಾಡುವುದು ಹಬ್ಬದ ಆಚಾರ. ಕರ್ನಾಟಕ, ಕೇರಳ, ಆಂಧ್ರಪ್ರದೇಶ, ತಮಿಳುನಾಡಿನಲ್ಲಿ ಹಬ್ಬದ ಸಡಗರ ಭೋಗಿ, ಪೊಂಗಲ್, ಮಾಟ್ಟು ಪೊಂಗಲ್, ಕಾಣು ಪೊಂಗಲ್ ಮತ್ತು ಜಲ್ಲಿ ಕಟ್ಟು ಎನ್ನುವ ಗೂಳಿಯನ್ನು ಪಳಗಿಸುವ ಆಟವೂ ನಡೆಯುತ್ತದೆ.

ಹೊಸ ಮಡಿಕೆ, ಹೊಸ ಪಾತ್ರೆಗಳಿಗೆ ಅರಿಶಿನ ಕುಂಕುಮ ಇಟ್ಟು, ಅರಿಶಿನ ದಾರದಲ್ಲಿ ಹಸಿ ಅರಿಶಿನ ಗಡ್ಡೆ ಮಡಿಕೆಗೆ ಕಟ್ಟಿ ಒಲೆಯ ಮೇಲಿಟ್ಟು ಮಡಿಕೆಯಲ್ಲಿ ಅಕ್ಕಿ, ಬೇಳೆ ಮತ್ತು ಹಾಲು, ತುಪ್ಪ, ಬೆಲ್ಲಗಳನ್ನು ಕುದಿಸಿ ಪೊಂಗಲ್ ಉಕ್ಕಿಸಲಾಗುತ್ತದೆ. ಇದು ಶುಭ ಸಮೃದ್ಧಿಯ ಸಂಕೇತವಾಗಿರುತ್ತದೆ. ಗೋಪೂಜೆ ಹೆಚ್ಚು ಜನಪ್ರಿಯ. ವರ್ಷವಿಡಿ ತಮ್ಮ ವ್ಯವಸಾಯ ಕ್ಷೇತ್ರದಲ್ಲಿ ದುಡಿದು ಧಾನ್ಯ ಸಮೃದ್ಧಿಗೆ ಕಾರಣವಾಗುವ ಮತ್ತು ಹಾಲು ನೀಡುವ ಗೋವುಗಳನ್ನು ಸಂಕ್ರಾಂತಿಂದು ಪೂಜಿಸುವ ಮೂಲಕ ಕೃತಜ್ಞತೆ ಅರ್ಪಿಸುವುದು, ಧಾನ್ಯಗಳ ಜೊತೆಗಿರುವ ಕಸ ಕಡ್ಡಿಗಳನ್ನು ಬೇರ್ಪಡಿಸಿ ಹುಲ್ಲು ಕಡ್ಡಿಗಳಿಗೆ ಬೆಂಕಿ ಹಚ್ಚುತ್ತಾರೆ.

ಜಾನುವಾರುಗಳನ್ನು ಕಿಚ್ಚು ಹಾಯಿಸುವ ಮೂಲಕ ಸಂಭ್ರಮ ಆಚರಣೆ ನಡೆಯುತ್ತದೆ. ಪೊಂಗಲ್ ಹಬ್ಬದ ದೀನವೆ ಕೇರಳ ರಾಜ್ಯದಲ್ಲಿ ಮಕರ ಸಂಕ್ರಾಂತಿಯಂದು ಶಬರಿಮಲೆಯಲ್ಲಿ ಕಾಣುವ ಮಕರ ಜ್ಯೋತಿ ನೋಡಲು ಅಯ್ಯಪ್ಪ ಭಕ್ತಾದಿಗಳು ಶಬರಿ ಮಲೆಗೆ ಹೋಗಿ ಅಯ್ಯಪ್ಪ ಸ್ವಾಮಿ ಮತ್ತು ಮಕರ ಜ್ಯೋತಿಯ ದರ್ಶನವನ್ನು ಮಾಡುತ್ತಾರೆ.



**- ವಿ.ಎಂ. ಎಸ್. ಗೋಪಿ.**
**ಲೇಖಕರು, ಸಾಹಿತಿಗಳು, ಬೆಂಗಳೂರು.**

### ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಸೇವಾದೀಕ್ಷೆ ಕಾರ್ಯಕ್ರಮ

# ವಚನಗಳು ಶರಣರು ನೀಡಿದ ಬಹುದೊಡ್ಡ ಕೊಡುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ವಚನ ಸಾಹಿತ್ಯ ಎಂಬುದು ವಿಶ್ವದ ಶ್ರೇಷ್ಠ ಅನುಭಾವ ಸಾಹಿತ್ಯವಾಗಿರುವುದರಿಂದ ನಮ್ಮೆಲ್ಲ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬಹುದೆಂದು ಗದುಗಿನ ತೋಂಟದಾರ್ಯ ಮಠದ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಹೇಳಿದರು.

ಅವರು ನಗರದ ತೋಂಟದಾರ್ಯ ಮಠದ ಅನುಭವ ಮಂಟಪದಲ್ಲಿ ನಡೆದ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಸೇವಾದೀಕ್ಷೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದ ಸಂವಿಧಾನದ ಆಶಯಗಳೆಲ್ಲ ವಚನ ಸಾಹಿತ್ಯದಲ್ಲಿವೆ. ವಚನ ಸಾಹಿತ್ಯವನ್ನು ಸರಿಯಾಗಿ ಅಧ್ಯಯನ ಮಾಡಿದರೆ ಸಮಾಜದಲ್ಲಿರುವ ಮೌಢ್ಯತೆಗಳನ್ನು, ಕಂದಾಚಾರಗಳನ್ನು ಹೋಗಲಾಡಿಸಿ ಸಮಾಜವನ್ನು ಸರ್ವ ವಿಧದಿಂದಲೂ ಸಶಕ್ತಗೊಳಿಸಬಹುದು ಎಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷ ಕೆ.ಎ. ಬಳಿಗೇರ ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಷತ್ತು ಜಿಲ್ಲೆಯಲ್ಲಿ ನಡೆದು




ಬಂದ ದಾರಿಯ ಕುರಿತು ಸಿಂಹಾವಲೋಕನ ಮಾಡಿದರು.

ಕಾರ್ಯಕ್ರಮವನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ್ ಉದ್ಘಾಟಿಸಿ ಮಾತನಾಡಿ, ಶರಣರ ಜೀವನ ಆದರ್ಶಗಳನ್ನು, ವಚನಗಳ ತತ್ವ-ಸಿದ್ಧಾಂತಗಳನ್ನು ಮನೆಮನೆಗಳಿಗೆ ತಲುಪಿಸಬೇಕು. ಶಾಲಾ-ಕಾಲೇಜಿನ ವಿದ್ಯಾರ್ಥಿಗಳಿಗೆ ವಚನಗಳಲ್ಲಿರುವ ಮೌಲ್ಯಗಳನ್ನು ತಿಳಿಸುವ ಗುರುತರವಾದ ಜವಾಬ್ದಾರಿಯನ್ನು ನೂತನ ಪದಾಧಿಕಾರಿಗಳು ನಡೆಸಿಕೊಡಬೇಕು. ಪರಿಷತ್ತು ಹಾಕಿಕೊಳ್ಳುವ ಎಲ್ಲ ಕಾರ್ಯಕ್ರಮಗಳಲ್ಲೂ ನನ್ನ ಸಹಕಾರವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವ ಎಸ್. ಎಸ್. ಪಾಟೀಲ್ ಮಾತನಾಡಿ, ಪ್ರತಿಯೊಬ್ಬ ಮಹಿಳೆಯರು ತಮ್ಮ ಮಕ್ಕಳಿಗೆ ವಚನಗಳನ್ನು ಕಲಿಸಿ ಶರಣರ ಜೀವನಾರ್ಶನಗಳನ್ನು ತಿಳಿಸಿ ಸಂಸ್ಕಾರವನ್ನು ಕಲಿಸುವ ಗುರುತರವಾದ ಜವಾಬ್ದಾರಿಯನ್ನು ವಹಿಸಬೇಕು ಎಂದು ಹೇಳಿದರು.

> ನಾಡಿನ ಹೆಸರಾಂತ ಮಹಿಳಾ ಸಾಹಿತಿ ನಾಡೋಜ ಡಾ. ಮೀನಾಕ್ಷಿ ಬಾಳಿ ಉಪನ್ಯಾಸ ನೀಡಿ, ಮಹಿಳೆಯರಿಗೆ ಧಾರ್ಮಿಕ ಸ್ವಾತಂತ್ರ್ಯವಿಲ್ಲದ ಕಾಲದಲ್ಲಿ ಇಷ್ಟಲಿಂಗವನ್ನು ಜನಸಾಮಾನ್ಯರ ಹಸ್ತಕ್ಕಿರಿಸಿ ಅದರ ಉಪಾಸನೆ ಮಾಡುವುದರ ಮೂಲಕ ಎಲ್ಲರೂ ದೈವತ್ವವನ್ನು ಸಾಧಿಸಬಹುದು ಎಂದು ಬಸವಣ್ಣನವರು ಮನುಕುಲಕ್ಕೆ ತಿಳಿಸಿದ್ದಾರೆ. ಕರ್ನಾಟಕ ಸರಕಾರ ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ಸಮಸ್ತ ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಕೆ.ಎಸ್. ಚಟ್ಟಿ, ಸಾಹಿತಿ ವಿಶ್ವಾರಾಧ್ಯ ಸತ್ಯಂಪೇಟೆ ಇದ್ದರು. ಈ ವೇಳೆ ಯು.ಪಿಎಸ್‌ಸಿ ಪರೀಕ್ಷೆಯಲ್ಲಿ ದೇಶಕ್ಕೆ 434ನೇ ರ‍್ಯಾಂಕ್ ಪಡೆದ ಯಲ್ಲಪ್ಪ ಗೋಶ್ಯಾಲ್ಲನವರ ಹಾಗೂ ಹತ್ತು ಜನ ನೂತನ ದತ್ತಿ ದಾನಿಗಳನ್ನು ಸನ್ಮಾನಿಸಲಾಯಿತು.

ಜಗದ್ಗುರುಗಳು ನೂತನ ಅಧ್ಯಕ್ಷರಿಗೆ ಪರಿಷತ್ತಿನ ಧ್ವಜವನ್ನು ಹಸ್ತಾಂತರಿಸಿದರು. ನಿವೃತ್ತ ಉಪನಿರ್ದೇಶಕ ಐ.ಬಿ. ಬೆನಕೊಪ್ಪ ಅವರು ನೂತನ ಪದಾಧಿಕಾರಿಗಳಿಗೆ ಪ್ರಮಾಣವಚನ ಬೋಧಿಸಿದರು. ಶ.ಸಾ.ಪ ಮಾಜಿ ಅಧ್ಯಕ್ಷ ಎ.ಓ. ಪಾಟೀಲ್, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರು, ಕದಳಿ ವೇದಿಕೆ ಜಿಲ್ಲಾಧ್ಯಕ್ಷೆ ಸುಧಾ ಹುಚ್ಚಣ್ಣವರ್, ಆರ್.ಎಲ್. ಪೊಲೀಸ್‌ಪಾಟೀಲ್, ಡಾ. ಎಸ್.ಸಿ. ಚವಡಿ, ವೀರೇಶ ಬಾದಾಮಿ, ಶೇಖಣ್ಣ ಕಳಸಾಪುರ, ಎಂ.ಕೆ. ಲಮಾಣಿ, ಚಾಂದಸಾಬ್ ಮುಳುಗುಂದ, ಲೀಲಕ್ಕ ಹಸಬಿ, ಜಾಬಣ್ಣವರ, ಬಸವರಾಜ್ ಕೋಟಗಿ ಸೇರಿದಂತೆ ಶ.ಸಾ.ಪ ತಾಲೂಕಾ ಪದಾಧಿಕಾರಿಗಳು ಹಾಗೂ ಕದಳಿ ವೇದಿಕೆ ಪದಾಧಿಕಾರಿಗಳು ಭಾಗವಹಿಸಿದ್ದರು.

ನೀಲಮ್ಮ ಕುಳಗೇರಿ ಹಾಗೂ ರೇಣುಕಾ ಲಕ್ಕುಂಡಿ ವಚನ ಗಾಯನ ಪ್ರಸ್ತುತಪಡಿಸಿ ನಿರೂಪಣೆ ಮಾಡಿದರೆ, ವರ್ಷಾ ಬಾರಕೇರ ಕಾರ್ಯಕ್ರಮ ನಿರ್ವಹಿಸಿದರು.




ರೋಣದ ಶರಣ ಶಿಕ್ಷಣ ಸಮಿತಿ 8ನೇ ತರಗತಿ ವಿದ್ಯಾರ್ಥಿ ವೈಭವ ಬಸವರಾಜ ಸಂಗನಬಶೆಟ್ಟರ ರಾಜ್ಯ ಮಟ್ಟದ ಚೆಸ್ ಸ್ಪರ್ಧೆಯಲ್ಲಿ ವಿಜಯಶಾಲಿಯಾಗುವ ಮೂಲಕ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ವಿದ್ಯಾರ್ಥಿಯ ಸಾಧನೆಗೆ ಬಿಇಒ ರುದ್ರಪ್ಪ ಹುರಳಿ, ಡಾ. ಎಸ್.ಬಿ. ಲಕ್ಕೋಳ ಸೇರಿದಂತೆ ಶಿಕ್ಷಣ ಸಮಿತಿ ನಿರ್ದೇಶಕರು, ಶಿಕ್ಷಕರು, ಸಿಬ್ಬಂದಿಗಳು ಪ್ರಸಂಶೆ ವ್ಯಕ್ತಪಡಿಸಿದ್ದಾರೆ.

# ಶಿವಪೂಜೆಯಿಂದ ಅಂತಃಶಕ್ತಿ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹೂವಿನಶಿಗ್ಲಿ ಮಠದ ಜಾತ್ರಾ ಮಹೋತ್ಸವದ ನಿಮಿತ್ತ ವಟುಗಳಿಗೆ ಲಿಂಗದೀಕ್ಷೆ ಹಾಗೂ ಅಯ್ಯಾಚಾರ ಸಂಸ್ಕಾರ ಕಾರ್ಯಕ್ರಮ ಸೋಮವಾರ ಲಕ್ಷ್ಮೇಶ್ವರ ಕರೇವಾಡಿಮಠದ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯರ ನೇತೃತ್ವದಲ್ಲಿ ನೆರವೇರಿತು.

ಈ ವೇಳೆ ಆಶೀರ್ವಚನ ನೀಡಿದ ಶ್ರೀಗಳು, ಲಿಂಗಧಾರಣೆ, ಶಿವಪೂಜೆಯಿಂದ ಆತ್ಮಬಲ ಹೆಚ್ಚಿ ಸಮಾಜದಲ್ಲಿನ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳುವ ಹಕ್ಕು ಪ್ರಾಪ್ತವಾಗುತ್ತದೆ. ವಿಭೂತಿ, ಲಿಂಗ,




ಜೋಳಿಗೆ, ದಂಢ ಇವು ಸಂಸ್ಕಾರದ ಸಂಕೇತಗಳಾಗಿವೆ. ಲಿಂಗದೀಕ್ಷೆಯಿಂದ ಆಧ್ಯಾತ್ಮಿಕ ಜ್ಞಾನ, ಬದುಕಿನ ಶಾಂತಿ, ನೆಮ್ಮದಿಗೆ ಪೂರಕವಾದ ಅಂತಃಶಕ್ತಿ ವೃದ್ಧಿಸುತ್ತದೆ. ನಿತ್ಯದ ಬದುಕಿನಲ್ಲಿ ಆಧ್ಯಾತ್ಮಿಕತೆ, ಧ್ಯಾನ, ಪ್ರಾರ್ಥನೆ ರೂಡಿಸಿಕೊಳ್ಳಬೇಕು. ಗುರು ಹಿರಿಯರಿಗೆ ಗೌರವ ನೀಡುವುದು, ನಮ್ಮ ಸಂಸ್ಕೃತಿ, ಆಚಾರ-ವಿಚಾರಗಳನ್ನು ಬೆಳೆಸುವ ಮೊದಲಾದ ಗುಣಗಳನ್ನು ಮಕ್ಕಳಿಗೆ ತಿಳಿಸಿಕೊಡುವ ಕಾರ್ಯವಾಗಬೇಕು ಎಂದು ಹೇಳಿದರು. ಹತ್ತಾರು ವಟುಗಳಿಗೆ ಲಿಂಗದೀಕ್ಷೆ ಕರುಣಿಸಲಾಯಿತು.

ಬಳಿಕ ಹತ್ತಿಮತ್ತೂರಿನ ಶ್ರೀ ನಿಜಗುಣ ಶ್ರೀಗಳು ಷಟಸ್ಥಲ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಹೂವಿನಶಿಗ್ಲಿ ಮಠವು ಗ್ರಾಮೀಣ ಭಾಗದ ಬಡವರು, ಅನಾಥ ಮಕ್ಕಳಿಗೆ ಹತ್ತಾರು ಸಂಕಷ್ಟಗಳ ನಡುವೆಯೂ ತ್ರಿವಿಧ ದಾಸೋಹ ಸೇವೆಯ ಜತೆಗೆ ಲಿಂ. ನಿರಂಜನ ಶ್ರೀಗಳು ಹಾಕಿಕೊಟ್ಟ ಮಠದ ಪರಂಪರೆ ಉಳಿಸುವದರೊಂದಿಗೆ ಧರ್ಮ, ಸಂಸ್ಕಾರಗಳನ್ನು ಬಿತ್ತುವ ಕೆಲಸ ಮಾಡುತ್ತಾ ದೊಡ್ಡ ಶಕ್ತಿಯಾಗಿ ಬೆಳೆಯುತ್ತಿದೆ. ಶ್ರೀಗಳ ಶ್ರೇಷ್ಠತಮನಾದ ಸಮಾಜೋಪಯೋಗಿ ಕಾರ್ಯಕ್ಕೆ ಭಕ್ತರ ಸಹಾಯ-ಸಹಕಾರ ಅಗತ್ಯ ಎಂದರು. ಶ್ರೀಮಠದ ಚನ್ನವೀರಮಹಾಸ್ವಾಮಿಗಳು ಮಾತನಾಡಿ, ಹೂವಿನಶಿಗ್ಲಿ ಸೇರಿ ನಾಡಿನಾದ್ಯಂತ ಇರುವ ಭಕ್ತರು ಮಾಡುತ್ತಿರುವ ತನು-ಮನ-ಧನದ ಸೇವಾಕಾರ್ಯದಿಂದ ಮಠದಲ್ಲಿ ತ್ರಿವಿಧ ಸೇವೆ, ಜಾತ್ರೆ, ಮಹೋತ್ಸವ, ಪರಂಪರೆ ಉಳಿಸಿಕೊಂಡು ಬರಲು ಸಾಧ್ಯವಾಗುತ್ತಿದೆ ಎಂದರು. ಈ ವೇಳೆ ಹೂವಿನಶಿಗ್ಲಿ, ತೆಲಂಗಾಣ, ಸೋನಾಳದ ಭಕ್ತರು ಭಾಗವಹಿಸಿದ್ದರು. ಶಿಕ್ಷಕ ಕೆ.ಎಸ್. ಇಟಗಿಮಠ ನಿರೂಪಿಸಿದರು.

### ಗದಗ ಜಿಲ್ಲಾ ಸಾಹಿತ್ಯ ಸಮ್ಮೇಳನದ ಲಾಂಚನ ಬಿಡುಗಡೆಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ಕನ್ನಡದ ಕಂಪು ಜಿಲ್ಲೆಯೆಲ್ಲೆಡೆ ಪಸರಿಸಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸಾಹಿತ್ಯ, ಸಂಗೀತ, ಸಂಸ್ಕೃತಿಗಳು ತನ್ನದೇ ಆದ ಐತಿಹಾಸಿಕ ಪಂರಂಪರೆ ಹೊಂದಿದೆ. ಈ ಐತಿಹಾಸಿಕ ಇತಿಹಾಸ ಪರಂಪರೆ ಜಿಲ್ಲೆಯ ಅಧಿಕ ಸಾರ್ವಜನಿಕರಿಗೆ ತಲುಪಲಿ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾ ಸಾಹಿತ್ಯ ಸಮ್ಮೇಳನದ ಲಾಂಚನವನ್ನು ಜಿಲ್ಲಾಡಳಿತ ಭವನದಲ್ಲಿ ರವಿವಾರ ಬಿಡುಗಡೆ ಮಾಡಿ ಸಚಿವರು ಮಾತನಾಡಿ, ಜನವರಿ 20, 21ರಂದು ಜಿಲ್ಲೆಯ ಗಜೇಂದ್ರಗಡ ನಗರದಲ್ಲಿ ಜರುಗುವ ಸಮ್ಮೇಳನ ಅತ್ಯಂತ ವ್ಯವಸ್ಥಿತವಾಗಿ ಜರುಗಲಿ. ಕನ್ನಡದ ಕಂಪು ಜಿಲ್ಲೆಯೆಲ್ಲೆಡೆ ಪಸರಿಸಲಿ ಎಂದರು.

> ಗದಗ ಜಿಲ್ಲೆಯ ಸಾಹಿತ್ಯ ಸಮ್ಮೇಳನದ ಮೂಲಕ ಜನಸಾಮಾನ್ಯರಿಗೂ ಸಹ ನಾಡಿನ ಜಿಲ್ಲೆಯ ಸಾಹಿತ್ಯ-ಸಂಸ್ಕೃತಿಯ ಪರಿಚಯ ಆಗಬೇಕು. ಈ ಮೂಲಕ ನಮ್ಮ ಗದಗ ಜಿಲ್ಲೆಯ ಐತಿಹಾಸಿಕ ಪರಂಪರೆಯ ಅರಿವು ಮೂಡಬೇಕು. ಒಟ್ಟಾರೆ ಸಾಹಿತ್ಯ ಸಮ್ಮೇಳನದ ಮೂಲ ಆಶಯ ಇಡೇರಬೇಕು ಎಂದು ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ರಾಮಕೃಷ್ಣ ಆಶ್ರಮದ ಜಗನ್ನಾಥಾನಂದ ಶ್ರೀಗಳು, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ್ ಮಂದಾಲಿ, ಸಿದ್ದು ಪಾಟೀಲ, ಎಸ್. ಎನ್. ಬಳ್ಳಾರಿ, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಪರಿಷತ್ತಿನ ಗೌರವ ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರ್ ಬಾಬು ನಾಗರಕಟ್ಟಿ, ಕೋಶಾಧ್ಯಕ್ಷ ಡಿ.ಎಸ್. ಬಾಪುರಿ, ದತ್ತ ಪ್ರಸನ್ನ ಪಾಟೀಲ ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಡಿವೈಎಸ್‌ಪಿ ವಿದ್ಯಾನಂದ ನಾಯ್ಕ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ಶ್ರೀ ಗವಿಸಿದ್ದೇಶ್ವರ ದ್ವಾರಬಾಗಿಲಕ್ಕೆ ದೀಪಾಲಂಕಾರ


■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ದಕ್ಷಿಣ ಭಾರತದ ಕುಂಭಮೇಳವೆಂದು ಪ್ರಖ್ಯಾತಿ ಪಡೆದ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ಧಾರ್ಮಿಕ, ಸಾಮಾಜಿಕ, ಸಾಂಪ್ರದಾಯಿಕ ಕಾರ್ಯಕ್ರಮಗಳ ಸಂಗಮ. ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ನಿಮಿತ್ತ ನಾಡಿನ ಅನೇಕ ಭಕ್ತರು ವಿವಿಧ ವಿಶಿಷ್ಟ ಭಕ್ತಿ ಸೇವೆಗಳನ್ನು ಸಲ್ಲಿಸುವುದರ ಮೂಲಕ ಭಕ್ತಿ ಅರ್ಪಿಸುವದು ಅಪ್ಯಾಯಮಾನ. ಹಾಗೆಯೇ ಜಹಗಿರ್ ಗುಡುದೂರಿನ ಸ್ನೇಹಜೀವಿ ಲೈಟಿಂಗ್ ಅರೇಂಜ್‌ಮೆಂಟ್ ಸೇವಾ ಮಂಡಳಿಯಿಂದ ಮಹಾ ಜಾತ್ರೋತ್ಸವಕ್ಕೆ ವಿವಿಧ ಬಣ್ಣ ಬಣ್ಣದ ವಿಶಿಷ್ಟ ಆಕರ್ಷಕ ಲೈಟಿಂಗ್‌ಗಳನ್ನು ಗಂಜವೃತ್ತದಲ್ಲಿರುವ ಶ್ರೀ ಗವಿಸಿದ್ದೇಶ್ವರ ಮಹಾದ್ವಾರಕ್ಕೆ



ತಮ್ಮ ಸೇವಾ ಸಮಿತಿ ವತಿಯಿಂದ ಉಚಿತವಾಗಿ ಅಣಿಳಿಸುವ ಮೂಲಕ ಜಾತ್ರೆಯ ಅಲಂಕಾರಕ್ಕೆ ಮತ್ತಷ್ಟು ಮೆರಗು ತಂದಿದ್ದಾರೆ.

ಭಕ್ತರಿಗೆ ಆಹ್ವಾನ ನೀಡುವ, ಸ್ವಾಗತ ಕೋರುವ, ಹೂವು, ಗವಿಶ್ರೀ ಹೆಸರು, ಹೆಲಿಕ್ಯಾಪ್ಟರ್, ಛತ್ರಿ, ಶ್ರೀಶಿವಶಾಂತವೀರ ಸ್ವಾಮೀಜಿಯವರ ಭಾವಚಿತ್ರವಿರುವ ವಿವಿಧ ಬಣ್ಣ ಬಣ್ಣದ ವಿದ್ಯುತ್ ದೀಪ ಅಲಂಕಾರ ಮಾಡಿದ್ದಾರೆ. 7 ಜನ ಯುವಕರು ಒಂದು ದಿನ ಪೂರ್ತಿಯಾಗಿ ಈ ದೀಪಾಲಂಕಾರದ ಕಾರ್ಯದಲ್ಲಿ ತೊಡಗಿಕೊಂಡು ಸೇವೆಗೈದಿದ್ದಾರೆ. ಶ್ರೀ ಗವಿಸಿದ್ದೇಶ್ವರ ದ್ವಾರಬಾಗಿಲು ಈಗಾಗಲೇ ನೋಡಲು ಭವ್ಯವಾಗಿದ್ದು, ವಿದ್ಯುತ್ ದೀಪ ಅಲಂಕಾರಗಳಿಂದ ದ್ವಾರಬಾಗಿಲಿನ ಸೌಂದರ್ಯ ದುಪ್ಪಟ್ಟುಗೊಂಡು ನೋಡುಗರ ಆಕರ್ಷಣೆಗೆ ಕಾರಣವಾಗಿದೆ. ಯುವಕರ ಭಕ್ತಿಯ ಸೇವೆಯನ್ನು ಪರಮ ಪೂಜ್ಯರು ಪ್ರಶಂಶಿಸಿ ಆಶೀರ್ವದಿಸಿದ್ದಾರೆ ಎಂದು ಗವಿಮಠದ ಪ್ರಕಟಣೆ ತಿಳಿಸಿದೆ.





## ಕಸಾಪ ಜಿಲ್ಲಾ ಸಮ್ಮೇಳನ ಪೂರ್ವ ಸಿದ್ಧತಾ ಸಭೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗಜೇಂದ್ರಗಡದಲ್ಲಿ ಜ. 20, 21ರಂದು ನಡೆಯಲಿರುವ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಮ್ಮೇಳನದ ಭುವನೇಶ್ವರಿ ಜ್ಯೋತಿ ರಥಯಾತ್ರೆ ಜ. 18, 19ರಂದು ಸಮೀಪದ ಜಕ್ಕಲಿ ಗ್ರಾಮಕ್ಕೆ ಆಗಮಿಸುವ ಕುರಿತು ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಪೂರ್ವ ಸಿದ್ಧತಾ ಸಭೆ ಜರುಗಿತು.

ರೋಣ ತಾಲೂಕಾ ಕಸಾಪ ಅಧ್ಯಕ್ಷ ರಮಾಕಾಂತ ಕಮತಗಿ ಸಭೆಯಲ್ಲಿ ಭುವನೇಶ್ವರಿ ಜ್ಯೋತಿ ರಥಯಾತ್ರೆ ಆಗಮಿಸುವ ಕುರಿತು ಪ್ರಸ್ತಾಪಿಸಿದರು. ಆ. 19ರ ಬೆಳಿಗ್ಗೆ 10ಕ್ಕೆ ಜಿಲ್ಲಾ ಸಮ್ಮೇಳನಕ್ಕೆ ಪೂರಕವಾಗುವಂತೆ ತಾಯಿ ಭುವನೇಶ್ವರಿಯ ಮೆರವಣಿಗೆಯು ಜಕ್ಕಲಿ ಗ್ರಾಮದಿಂದಲೇ ಪ್ರಾರಂಭಗೊಂಡು ನರೇಗಲ್ಲ-ನಿಡಗುಂದಿ ಮೂಲಕ ಗಜೇಂದ್ರಗಡ ತಲುಪುವ ಬಗ್ಗೆ ತಿಳಿಸಿ, ಆ ಸಂದರ್ಭದಲ್ಲಿ ಭುವನೇಶ್ವರಿಯ ಮೆರವಣಿಗೆಯನ್ನು ಹೇಗೆ ನಡೆಸಬೇಕು ಮತ್ತು ತಾಯಿ ಭುವನೇಶ್ವರಿಯನ್ನು ಗ್ರಾಮದಿಂದ ಹೇಗೆ ಬೀಳ್ಕೊಡಬೇಕು ಎಂಬುದರ ಬಗ್ಗೆ ತಿಳಿಸಿದರು.

ಸಭೆಯ ಅಧ್ಯಕ್ಷತೆಯನ್ನು ಎಸ್.ಎ.ಜೆ.ಡಿ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ ವಹಿಸಿದ್ದರು. ಈ ವೇಳೆ ಕಸಾಪ ಗ್ರಾಮ ಘಟಕದ ಅಧ್ಯಕ್ಷ ಪ್ರಕಾಶ ವಾಲಿ, ಪತ್ರಕರ್ತ ಸಂಗಮೇಶ ಮೆಣಸಿಗಿ, ಸರ್ಕಾರಿ ಹಿರಿಯ ಹೆಣ್ಣು ಮಕ್ಕಳ ಶಾಲಾ ಮುಖ್ಯ ಶಿಕ್ಷಕ ಎಸ್.ಬಿ. ಗವಿ, ಸರ್ಕಾರಿ ಮಾದರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಭಾಗವಹಿಸಿದ್ದರು.

## ಧರ್ಮದ ಬಗ್ಗೆ ಅಭಿಮಾನ ಹೊಂದಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅನೇಕರ ತ್ಯಾಗ-ಬಲಿದಾನಗಳೊಂದಿಗೆ ಸುದೀರ್ಘ 50 ವರ್ಷಗಳ ಹೋರಾಟ, ತಪಃಶಕ್ತಿಯಿಂದ ಶ್ರೀ ರಾಮ ಮಂದಿರ ನಿರ್ಮಾಣವಾಗಿದೆ ಎಂದು ವಿಶ್ವ ಹಿಂದೂ ಪರಿಷತ್‌ನ ತಾಲೂಕಾಧ್ಯಕ್ಷ ಬಸವರಾಜ ಅರಳಿ ಹೇಳಿದರು.

ಅವರು ಪಟ್ಟಣದ ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಅಯೋಧ್ಯೆ ರಾಮಮಂದಿರದ ಪ್ರಾಣ ಪ್ರತಿಷ್ಠಾನೆಯ ವರ್ಷದ ಸಂಭ್ರಮ ನಿಮಿತ್ತ ವಿಶ್ವ ಹಿಂದೂ ಪರಿಷತ್‌ನಿಂದ ಶ್ರೀ ರಾಮನಾಮ ಜಪ ಕಾರ್ಯಕ್ರಮ ನೆರವೇರಿಸಿದ ಬಳಿಕ ಮಾತನಾಡಿ, ಮರ್ಯಾದಾ ಪುರುಷೋತ್ತಮ ಶ್ರೀ ರಾಮನ ನಾಮ ಸ್ಮರಣೆ, ಭಕ್ತಿ ಹಾಗೂ ನಂಬಿಕೆಯಿಟ್ಟು ಸಾಗಿದರೆ ಜೀವನವು ಸಂತೃಪ್ತಿಯಿಂದ ಕೂಡಿರುತ್ತದೆ. ಶ್ರೀರಾಮ ಹಿಂದೂಗಳ ಆರಾಧ್ಯ ದೇವರೇ ಆಗಿದ್ದು, ಎಲ್ಲರೂ ಧರ್ಮದ ಬಗ್ಗೆ ಅಭಿಮಾನ, ಸ್ವಾಭಿಮಾನ ಹೊಂದಿರಬೇಕು ಎಂದರು.

ವಿಹಿಂಪ ತಾಲೂಕು ಪ್ರ.ಕಾರ್ಯದರ್ಶಿ ರವಿ ಲಿಂಗಶೆಟ್ಟಿ, ಸುನೀಲ ಮೆಡ್ಲೇರಿ, ಟಾಕಪ್ಪ ಸಾತಪುತೆ, ಅಜಯ ಕರಿಗೌಡ್ರ, ಮಲ್ಲನಗೌಡ ಪಾಟೀಲ, ಎಂ.ಎಂ. ಕಾಂಡೋಜಿ, ಚಂದ್ರು ವಸ್ತ್ರದ, ಪಾಂಡುರಂಗ ಕಾಕಡೆ, ಕೊಟ್ರೇಶ ಅಳವಂಡಿ, ಸೋಮೇಶ್ವರ ದೇವಸ್ಥಾನ ಅರ್ಚಕ ರಾಘವೇಂದ್ರ ಪೂಜಾರ, ಚಿಕ್ಕರಸ ಪ್ರಜಾರ ಮುಂತಾದವರಿದ್ದರು.

## ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರ ಮನವಿ




■ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲ ರೈತರ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ನೀಡುವ ಕಾನೂನು ಜಾರಿಗೊಳಿಸುವುದೂ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ನಗರದಲ್ಲಿ ಸೋಮವಾರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ರೈತರ ಎಲ್ಲಾ ರೀತಿಯ ಕೃಷಿ ಸಾಲಗಳನ್ನು ಮನ್ನಾ ಮಾಡಬೇಕು, ವಿವಿಧ ಕಡೆ ನಡೆಯುತ್ತಿರುವ ಖಾಸಗೀಕರಣ ಹಾಗೂ ಪಂಪ್‌ಸೆಟ್ ಮೀಟರೀಕರಣದ ಪ್ರಯತ್ನ ಕೂಡಲೇ ನಿಲ್ಲಿಸಬೇಕು, 60 ವರ್ಷ ದಾಟಿರುವ ಎಲ್ಲ ಕೃಷಿಕರಿಗೆ 5 ಸಾವಿರ ರೂ ಮಾಸಿಕ ಪಿಂಚಣಿ ನೀಡಬೇಕು, ರೈತ ವಿರೋಧಿ, ಕರಾಳ ಕೃಷಿ ಕಾಯ್ದೆಯ ತದ್ರೂಪವಾಗಿರುವ ಕೃಷಿ ಮಾರುಕಟ್ಟೆ ರಾಷ್ಟ್ರೀಯ ಚೌಕಟ್ಟು ಧೋರಣೆ ವಾಪಸ್ಸು ಪಡೆಯಬೇಕು ಎಂದು ಒತ್ತಾಯಿಸಿದರು. ಕರಾಳ ಕೃಷಿ ಕಾಯ್ದೆಗಳನ್ನು ಹಿಂಬಾಗಿಲ ಮೂಲಕ ಜಾರಿ ಮಾಡಲಾಗುತ್ತಿದೆ. ಇಚಿತಹ ಹಲವು ರೈತ ವಿರೋಧಿ ಧೋರಣೆಗಳು ಹಾಗೂ ರೈತರ ಆಗ್ರಹಗಳನ್ನು ನಿರ್ಲಕ್ಷ್ಯ ಮಾಡಿದ್ದರ ಫಲವಾಗಿ ರೈತ ನಾಯಕರ ಪ್ರಾಣ ಹೋಗುವಂತಹ ಪರಿಸ್ಥಿತಿ ಉಂಟಾಗಿದೆ. ಈ ತಕ್ಷಣವೇ ರಾಷ್ಟ್ರಪತಿಗಳು, ಪ್ರಧಾನಮಂತ್ರಿಗಳು ಹಾಗೂ ಕೇಂದ್ರ ಸರಕಾರ ತಕ್ಷಣವೇ ಮಧ್ಯಪ್ರವೇಶ ಮಾಡಬೇಕು ಎಂದು ಮನವಿ ಮೂಲಕ ಒತ್ತಾಯಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಮುತ್ತನಗೌಡ ಚೌಡರಡ್ಡಿ, ಜಿಲ್ಲಾ ಗೌರವಾಧ್ಯಕ್ಷ ಮಾಹದೇವಗೌಡ ಪಾಟೀಲ, ರಾಮಪ್ಪ ಸವಡಿ, ಬಾಳಪ್ಪ ಮೊರಬದ, ಗೋವಿಂದಪ್ಪ ತಳವಾರ, ಶರಣಪ್ಪ ಕೊಪ್ಪದ, ಶರಣಪ್ಪ ಜೋರಗತ್ತಿ, ಅಲಾಸಾಬ್ ಕಣಗಿನಾಳ ಇದ್ದರು.

## ಕಾಂಗ್ರೆಸ್ ಸರ್ಕಾರದಿಂದ ಚಾಣಾಕ್ಷ ನಡೆ

▶▶ಮೊದಲನೇ ಪುಟದಿಂದ

ದಿನವಿಡೀ ಕೆಲಸ ಮಾಡುವ ಅಂಗನವಾಡಿ ಕಾರ್ಯಕರ್ತೆಯರಿಗೆ 15 ಸಾವಿರ ರೂ ಗೌರವ ಧನ ನೀಡಲು ಸರಕಾರಕ್ಕೆ ಸಾಧ್ಯವಾಗುತ್ತಿಲ್ಲ. ಅದೇ ಗ್ಯಾರಂಟಿ ಸಮಿತಿ ಅಧ್ಯಕ್ಷರಿಗೆ ಮಾಸಿಕ 25 ಸಾವಿರ ರೂ ಗೌರವ ಧನ ನೀಡಲಾಗುತ್ತಿದೆ. ವಿಶೇಷವಾಗಿ ನರಗುಂದದಲ್ಲಿ ಸೂಪರ್ ಎಂಎಲ್‌ಎ ಬಿ.ಆರ್. ಯಾವಗಲ್ ಅವರಿಂದಾಗಿ ಅಧಿಕಾರಿಗಳು ಹೈರಾಣಾಗಿದ್ದಾರೆ ಎಂದು ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ನಗರಸಭಾ ಸದಸ್ಯ ಅನಿಲ ಅಬ್ಬಿಗೇರಿ, ಮುಖಂಡರಾದ ಎಂ.ಎಸ್. ಕರಿಗೌಡ್ರ, ಶ್ರೀಪತಿ ಉಡುಪಿ, ಮಹೇಶ ದಾಸರ ಇದ್ದರು.

### ತ್ರಿವಿಧ ದಾಸೋಹದ ಮೂಲಕ ಲೋಕ ಕಲ್ಯಾಣಕ್ಕಾಗಿ ಸಮರ್ಪಿಸಿಕೊಂಡ ವಿರಕ್ತಮಠ

# ಹೂವಿನ ಶಿಗ್ಲಿ ಮಠದಲ್ಲಿ ಸಂಕ್ರಾಂತಿ ಸಂಭ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಾಡಿನ ಐತಿಹಾಸಿಕ ಪರಂಪರೆಯಲ್ಲಿ ಸಾಧುಗಳು, ಸಂತರು, ಶರಣರು, ಋಷಿಮುನಿಗಳು, ಮಠಾಧೀಶರು ತಮ್ಮ ತಪಃಶಕ್ತಿ, ಸಂಕಲ್ಪ, ಜ್ಞಾನ, ಅನುಭಾವಗಳಿಂದ ಸಮಾಜಸೇವೆ, ತ್ರಿವಿಧ ದಾಸೋಹದ ಮೂಲಕ ಲೋಕ ಕಲ್ಯಾಣಕ್ಕಾಗಿ ಸಮರ್ಪಿಸಿಕೊಂಡಿದ್ದಾರೆ. ಇದಕ್ಕೆ ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿ ವಿರಕ್ತಮಠ ಸಾಕ್ಷಿಯಾಗಿದೆ.

ಲಿಂ. ನಿರಂಜನ ಮಹಾಸ್ವಾಮಿಗಳು ಬಸವನಾಡು ಬೀದರ ಜಿಲ್ಲೆ ಔರಾದ್ ತಾಲೂಕಿನ ಸೋನಾಳ ಗ್ರಾಮದಿಂದ 1996ರಲ್ಲಿ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಆಗಮಿಸಿದ್ದರು. ಈ ವೇಳೆ ಅವರಿಗೆ ಸ್ವಪ್ನವೊಂದು ಬಿದ್ದು, ಹೂವಿನ ಶಿಗ್ಲಿಯಲ್ಲಿನ ಪಾಳು ಬಿದ್ದಿರುವ ಮಠವನ್ನು ಉದ್ಧರಿಸು ಎಂಬ ವಾಣಿಯನ್ವಯ ಕಲ್ಲು ಮುಳ್ಳುಗಳಿಂದ ಕೂಡಿದ, ಶಿಥಿಲಾವಸ್ಥೆಯ ಚಿಕ್ಕ ಗುಡಿಯಲ್ಲಿ ನೆಲೆನಿಂತ ಶ್ರೀಗಳು ತಮ್ಮ ಸಂಕಲ್ಪ ಶಕ್ತಿಯಿಂದ ಈ ಸ್ಥಳವನ್ನು ಜೀರ್ಣೋದ್ಧಾರಗೊಳಿಸಿದರು. ನಿತ್ಯ ಧರ್ಮ, ಸಂಸ್ಕೃತಿ, ಸಾಹಿತ್ಯ, ಶಿಕ್ಷಣ, ಪೂಜೆ, ಬಸವತತ್ವ ಪ್ರಚಾರ, ಯೋಗ, ಆಯುರ್ವೇದ ಶಾಸ್ತ್ರಗಳ ಮೂಲಕ ಕ್ಷೇತ್ರವನ್ನು ಬೆಳೆಸಿದರು. ಆಯುರ್ವೇದ ಔಷಧಿ ಸಿದ್ಧಪಡಿಸಿ ಮಾರಕ ರೋಗಗಳಿಗೆ ದಿವ್ಯೌಷಧಿ ನೀಡಿ ರೋಗಿಗಳ ಪಾಲಿಗೆ ಸಂಜೀವಿನಿಯಾಗಿದ್ದರು.

ತುಮಕೂರಿನ ಸಿದ್ಧಗಂಗಾ ಮಠದ ಶಿವಕುಮಾರ ಸ್ವಾಮಿಗಳ ನೆಚ್ಚಿನ ಶಿಷ್ಯರಾಗಿದ್ದ ಲಿಂ. ನಿರಂಜನ ಶ್ರೀಗಳು ಅವರಂತೆಯೇ ಗ್ರಾಮೀಣ ಪ್ರದೇಶಗಳ ಬಡ, ಅನಾಥ ಮಕ್ಕಳಿಗೆ



ತ್ರಿವಿಧ ದಾಸೋಹ ಸೇವೆಯ ಮೂಲಕ ಗುರುಕುಲ ಶಿಕ್ಷಣ ಆರಂಭಿಸಿ ಬಡ ಮಕ್ಕಳ ಆಶಾಕಿರಣವೇ ಆಗಿದ್ದರು. ಹೂವಿನ ಶಿಗ್ಲಿ ಅಷ್ಟೇ ಅಲ್ಲದೇ ಹುಟ್ಟೂರು ಸೋನಾಳ, ಆಂದ್ರದ ನಾಗನೂರ, ಶಿರಹಟ್ಟಿ ತಾಲೂಕಿನ ಕೊಂಚಿಗೇರಿ, ಹಾವೇರಿ ತಾಲೂಕಿನ ಸೋಮನಕಟ್ಟಿಯಲ್ಲಿ ಶಾಖಾಮಠ ಸ್ಥಾಪಿಸಿ ಜನಸೇವೆಯ ಮೂಲಕ ಹೆಸರಾದರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಪ್ರತಿವರ್ಷ ಸಂಕ್ರಾಂತಿಗೆ ನಾಡಿನ ಹರಗುರುಚರ ಮೂರ್ತಿಗಳ ಸಮ್ಮುಖದಲ್ಲಿ ಕ್ಷೇತ್ರದಲ್ಲಿ ಜಾತ್ರಾಮಹೋತ್ಸವ ನಿಮಿತ್ತ ವಿವಿಧ ಸಾಮಾಜಿಕ, ಧಾರ್ಮಿಕ, ಸಾಂಪ್ರದಾಯಿಕ ಹಬ್ಬಗಳನ್ನು ಆಚರಿಸುತ್ತಿದ್ದರು.

ನಿರಂಜನ ಮಹಾಸ್ವಾಮಿಗಳು 2011ರಲ್ಲಿ ಲಿಂಗೈಕ್ಯರಾದ ಬಳಿಕ ಶ್ರೀಮಠದ ಸಂಪೂರ್ಣ ಜವಾಬ್ದಾರಿ ಹೊತ್ತ ಹಾವೇರಿ ತಾಲೂಕಿನ ಮರೋಳ ಗ್ರಾಮದ ಚನ್ನವೀರ ಶ್ರೀಗಳು ಶ್ರೀಮಠ ಮತ್ತು ಗುರುಕುಲವನ್ನು ಅತ್ಯಂತ ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ಶ್ರೀಗುರು ನಿರಂಜನ ಪೂರ್ವ ಪ್ರಾಥಮಿಕ ಕನ್ನಡ ಶಾಲೆ, ಶ್ರೀ ಗುರುಕುಲ ವಸತಿ ಪ್ರಾಥಮಿಕ ಶಾಲೆ, ಶ್ರೀ ಗುರುಕುಲ ವಸತಿ ಪ್ರೌಢಶಾಲೆ ಆರಂಭಿಸಿದ ಪೂಜ್ಯರು ಬಡ ಹಾಗೂ ನಿರ್ಗತಿಕ ಮಕ್ಕಳಿಗೆ ಉಚಿತ ಶಿಕ್ಷಣ ನೀಡಲಾಗುತ್ತಿದೆ. ವ್ಯವಹಾರಿಕ ಯುಗದಲ್ಲಿ ಕಮರ್ಷಿಯಲ್ ಆಗದೇ, ಸೇವೆಯಾಗಿಯೇ ಮುಂದುವರೆದದ್ದು, ಶ್ರೀ ನಿರಂಜನ ಸ್ವಾಮೀಜಿ (ಬಾಬಾನಂದರು) ಹಾಗೂ ಈಗಿನ ಮಠಾಧೀಶರಾದ ಶ್ರೀ ಚನ್ನವೀರ ಸ್ವಾಮೀಜಿ ಅವರಿಗೆ ಸಲ್ಲುವ ಶ್ರೇಯಸ್ಸು. ಉತ್ತರ ಕರ್ನಾಟಕದ ಸಿದ್ಧಗಂಗೆಯಾಗಿರುವ ಈ ಗುರುಕುಲದಲ್ಲಿ ಬಡ, ಅನಾಥರು ಸೇರಿ 400ಕ್ಕೂ ಹೆಚ್ಚು ಮಕ್ಕಳು ಓದುತ್ತಿದ್ದು, ಅವರಿಗೆ ಶಿಕ್ಷಣದೊಂದಿಗೆ ಧರ್ಮ, ಸಂಸ್ಕೃತಿ, ಸಂಸ್ಕಾರ ಮತ್ತು ವೇದಾಧ್ಯಯನ ನೀಡಿ ಲಿಂ.ಶ್ರೀಗಳ ಮಾರ್ಗದಲ್ಲಿ ಮಠವನ್ನು ವಿಶಿಷ್ಟ ಜಾಗೃತ ಕೇಂದ್ರವನ್ನಾಗಿಸುವತ್ತ ಸಾಗಿದ್ದಾರೆ. ಬಡ ಹಾಗೂ ನಿರ್ಗತಿಕ ಮಕ್ಕಳನ್ನು ದತ್ತು ತೆಗೆದುಕೊಳ್ಳುತ್ತ ಅನೇಕರ ಬಾಳನ್ನು ಬೆಳಗುವ ನಂದಾದೀಪವಾಗಿದ್ದಾರೆ.

ಅಲ್ಲದೇ ಅವರು ತಮ್ಮ ಪ್ರವಚನದ ಮೂಲಕ ನಾಡಿನಾದ್ಯಂತ ಭಕ್ತ ಸಂಕುಲದ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಸರ್ಕಾರದ ಅನುದಾನವಿಲ್ಲದೇ ನಿತ್ಯ ನೂರಾರು ವಿದ್ಯಾರ್ಥಿಗಳಿಗೆ ಅನ್ನದಾಸೋಹದೊಂದಿಗೆ ಶಿಕ್ಷಣ ದಾಸೋಹ ಸಾಂಗವಾಗಿ ಶ್ರೀಗಳ ಆಣತಿಯಂತೆ ನಡೆದಿದೆ.

ಪ್ರತಿವರ್ಷದಂತೆ ಈ ವರ್ಷವೂ ಜ.13ರಿಂದ 15ವರೆಗೆ ನಾಡಿನ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ಅನ್ನದಾಸೋಹ, ಜ್ಞಾನ ದಾಸೋಹದ ಜಾತ್ರಾ ಮಹೋತ್ಸವ ಮತ್ತು ಲಿಂ.ಶ್ರೀಗಳ ಪುಣ್ಯಸ್ಮರಣೋತ್ಸವ ಆಚರಿಸಲಾಗುತ್ತದೆ. 'ಖಡಕ್ ರೊಟ್ಟಿ ಮತ್ತು ಕ್ವರಿಂಡಿ' ಪ್ರಸಾದವೇ ಈ ಜಾತ್ರೆಯ ವೈಶಿಷ್ಟ್ಯವಾಗಿದೆ. ಜಾತ್ರೆಗೆ ಹೂವಿನ ಶಿಗ್ಲಿ ಸೇರಿ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಶ್ರೀಮಠಕ್ಕೆ ರೊಟ್ಟಿ ಸೇರಿ ಇತರೇ ಆಹಾರ ಧಾನ್ಯಗಳನ್ನು ಸಮರ್ಪಿಸುತ್ತಾರೆ.

ಜ. 13ರಿಂದ 3 ದಿನಗಳ ಕಾಲ ಹೂವಿನ ಶಿಗ್ಲಿಯ ವಿರಕ್ತಮಠದ 46ನೇ ಜಾತ್ರಾ ಮಹೋತ್ಸವ, ಲಿಂ.ನಿರಂಜನ ಮಹಾಸ್ವಾಮಿಗಳವರ 15ನೇ ಪುಣ್ಯ ಸ್ಮರಣೋತ್ಸವ ನಿಮಿತ್ತ ಪುರಾಣ ಪ್ರವಚನ, ಲಿಂಗದೀಕ್ಷೆ, ಸಾಮೂಹಿಕ ವಿವಾಹ, ತುಲಾಭಾರ ಸೇವೆ, ಧರ್ಮಸಭೆ,ಮಹಾತ್ಮರ ಬದುಕು-ಬೆಳಕು ಚಿಂತನಗೋಷ್ಠಿ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.





### ಲಕ್ಕುಂಡಿ ಮಲ್ಲಿಕಾರ್ಜುನ ಮಹಿಳಾ ಸಂಘದ ವಾರ್ಷಿಕೋತ್ಸವ ಆಚರಣೆ

# ಮಹಿಳಾ ಸಂಘದಿಂದ ಕೀಳರಿಮೆ ದೂರ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಹಿಳಾ ಸಂಘವನ್ನು ರಚಿಸಿದ್ದರಿಂದ ನಮ್ಮ ಮಹಿಳೆಯರಲ್ಲಿ ಒಗ್ಗಟ್ಟು ಮೂಡಿ ಇಂದು ಆರ್ಥಿಕ ಸಂಕಷ್ಟಗಳನ್ನು ಎದುರಿಸುವಲ್ಲಿ ಸಫಲರಾಗಿದ್ದೇವೆ ಎಂದು ಮಲ್ಲಿಕಾರ್ಜುನ ಮಹಿಳಾ ವಿವಿಧೋದ್ದೇಶಗಳ ಹಾಗೂ ಕಲಾಭಿವೃದ್ಧಿ ಸಂಘದ ಅಧ್ಯಕ್ಷೆ ಕಸ್ತೂರೆವ್ವ ಕಲಕೇರಿ ಹೇಳಿದರು.

ಇಲ್ಲಿಯ ಮಲ್ಲಿಕಾರ್ಜುನ ಗುಡಿ ಓಣಿಯ ಮಲ್ಲಿಕಾರ್ಜುನ ಮಹಿಳಾ ವಿವಿಧೋದ್ದೇಶಗಳ ಹಾಗೂ ಕಲಾಭಿವೃದ್ಧಿ ಸಂಘದ 11ನೇ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಬಿಡುವಿಲ್ಲದ ತಮ್ಮ ದೈನಂದಿನ ಚಟುವಟಿಕೆಯನ್ನು ಬಿಟ್ಟು ಸಂಘಗಳಲ್ಲಿ ಭಾಗವಹಿಸುವುದು ಕಷ್ಟ ಎಂಬ ಆತಂಕದಲ್ಲಿಯೇ ಸಂಘವನ್ನು ರಚನೆ ಮಾಡಲಾಯಿತು. 68 ಸದಸ್ಯರನ್ನು ಒಗ್ಗೂಡಿಸಿ ಸಂಘವನ್ನು ರಚನೆ ಮಾಡಲಾಯಿತು. ಇದರಿಂದ ನಮ್ಮ ಸದಸ್ಯರಲ್ಲಿ ಒಗ್ಗಟ್ಟು ಮೂಡಿ ಒಂದು ಕಡೆ ಸೇರುವಂತಾಯಿತು. ತಮ್ಮಲ್ಲಿಯ ಕೀಳರಿಮೆಯನ್ನು ತೊರೆದು ಹಲವು ಸಾಮಾಜಿಕ ಕಾರ್ಯಗಳಲ್ಲಿ ಭಾಗಿಯಾದರು. ತಮ್ಮ ಕಷ್ಟ-ನಷ್ಟಗಳನ್ನು ಹಂಚಿಕೊಂಡು



ಧೈರ್ಯವಂತರಾಗಿದ್ದಾರೆ.

2014ರಲ್ಲಿ ರಚನೆಯಾದ ಸಂಘವು ಪ್ರತಿ ತಿಂಗಳು 100 ರೂ ಉಳಿತಾಯ ಖಾತೆಯನ್ನು ತೆರೆದಿದ್ದರಿಂದ ಇಂದು ಸಂಘದಲ್ಲಿ 12 ಲಕ್ಷ ರೂ.ವರೆಗೂ ವ್ಯವಹಾರ ನಡೆದಿದೆ. ಸದಸ್ಯರು ತಮ್ಮ ಕುಟುಂಬ ಹಾಗೂ ಸ್ವ-ಉದ್ಯೋಗ ಮಾಡಲು 20 ಸಾವಿರದಿಂದ 1 ಲಕ್ಷ ರೂ.ವರೆಗೂ ಸಾಲ ನೀಡಲಾಗುತ್ತಿದೆ. ಸಂಘದ ಬಡ್ಡಿ ಹಣದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳು, ಜಾನಪದ ಕಲಾವಿದರನ್ನು ಪ್ರೋತ್ಸಾಹಿಸಿ ಸನ್ಮಾನಿಸಲಾಗಿದೆ. ಗ್ರಾಮದ ಧಾರ್ಮಿಕ ಕಾರ್ಯಗಳಿಗೆ ಸಹಾಯ ಧನ ನೀಡಿ ಸೇವೆ ಸಲ್ಲಿಸುವ ಅವಕಾಶ ಬಂದಿದ್ದು ಸಂತಸ ತಂದಿದೆ ಎಂದರು.

ಶಿಕ್ಷಕಿ ಪ್ರೇಮಾ ಕರಮುಡಿ ಮಾತನಾಡಿ, ಮಹಿಳಾ ಸಂಘದ ಶ್ರೇಯೋಭಿವೃದ್ಧಿಗೆ ಸಾಕಷ್ಟು ಯೋಜನೆಗಳಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಸ್ವಾವಲಂಬಿಗಳಾಗಬೇಕು ಎಂದರು.

ಮಹಿಳಾ ಸಂಜೀವಿನಿ ಒಕ್ಕೂಟದ ಗೀತಾ ಮದ್ನೂರು, ವಿಜಯಲಕ್ಷ್ಮೀ ಕಟಿಗ್ಗಾರ, ಪಾರಮ್ಮ ಹಡಗಲಿ, ನೀಲಗಂಗಮ್ಮ ಹಗರಿ, ಮಹಾದೇವಿ ಮಾಯಾಕರಮಠ, ಚನ್ನಮ್ಮ ಹಗರಿ, ಜಯಶ್ರೀ ಬಡಿಗೇರ, ಪಾರಮ್ಮ ಶಲವಡಿ ಸೇರಿದಂತೆ ಸಂಘದ ಸರ್ವ ಸದಸ್ಯರು ಇದ್ದರು. ಕಸ್ತೂರಿ ಹಡಗಲಿ ಸಂಗಡಿಗರು ಪ್ರಾರ್ಥಿಸಿದರು. ಲಲಿತಾ ಕುಲಕರ್ಣಿ ಸ್ವಾಗತಿಸಿದರು. ಸಂಘದ ಖಜಾಂಚಿ ಸಾವಿತ್ರಿ ಯಲಿಶಿರುಂದ ನಿರೂಪಿಸಿದರು. ಕವಿತಾ ಮುದ್ದಿಕೋಲ ವಂದಿಸಿದರು.


ಸಂಘದ ಉಪಾಧ್ಯಕ್ಷೆ ನಾಗರತ್ನಾ ಹಡಗಲಿ ಮಾತನಾಡಿ, ಪರಸ್ಪರ ಸಹಾಯ-ಸಹಕಾರದಿಂದ ಸಂಘವು ಆರ್ಥಿಕವಾಗಿ ಬೆಳೆಯುತ್ತಿದೆ. ಕಡಿಮೆ ಬಡ್ಡಿ ದರದಲ್ಲಿ ಲಕ್ಷ ರೂ.ವರೆಗೂ ಸಾಲ ಸೌಲಭ್ಯ ದೊರೆಯುತ್ತಿದ್ದು, ಸದಸ್ಯರು ತಮ್ಮ ಆರ್ಥಿಕ ಸಮಸ್ಯೆಗಳನ್ನು ಸಂಜೀವಿನಿ ಒಕ್ಕೂಟದಿಂದ ಬಗೆಹರಿಸಿಕೊಳ್ಳಬಹುದು ಎಂದರು.

## ಇಂದು ಸಿದ್ದರಾಮೇಶ್ವರ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜ. 14ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಗದಗ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮವನ್ನು ಸಾಂಕೇತಿಕವಾಗಿ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಸರಳವಾಗಿ ಆಚರಿಸಲಾಗುವದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ



**ಬಸವಣ್ಣೆಪ್ಪ ಕಾಮಣ್ಣವರ್**

ಗದಗ: ಜಿಲ್ಲೆಯ ಮುಂಡರಗಿ ತಾಲೂಕಿನ ಹಿರೇವಡ್ಡಟ್ಟಿ ಗ್ರಾಮದವರು, ಕೆ.ಇ.ಬಿಯ ನಿವೃತ್ತ ನೌಕರರು ಆಗಿದ್ದ ನಗರದ ಮುಳಗುಂದ ರಸ್ತೆಯ ವೀರೇಶ್ವರ ನಗರದ ಬಸವಣ್ಣೆಪ್ಪ ವಿರುಪಾಕ್ಷಪ್ಪ ಕಾಮಣ್ಣವರ ಇವರು ತಮ್ಮ 74ನೇ ವಯಸ್ಸಿನಲ್ಲಿ ನಿಧನರಾದರು. ಇವರ ಅಂತಿಮಯಾತ್ರೆ ದಿ. 14-01-2025ನೇ ಮಂಗಳವಾರ ಮಧ್ಯಾಹ್ನ 12 ಘಂಟೆಗೆ ಸಗೃಹದಿಂದ ಹೊರಡಲಿದೆ. ಮೃತರು ಪತ್ನಿ, ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು, ಸಹೋದರರು, ಸಹೋದರಿಯರು ಹಾಗೂ ಅಪಾರ ಬಸವ-ಬಳಗವನ್ನು ಅಗಲಿದ್ದಾರೆ.

## ಮೂಲಿಮನಿಯವರ ಕನಸು ನನಸಾಗಿದೆ

▶▶ಮೊದಲನೇ ಪುಟದಿಂದ

ಬಿಂಕದಕಟ್ಟಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಸಹಕಾರಿ ಸಂಘ, ಹಾಲು ಉತ್ಪಾದಕರ ಸಹಕಾರಿ ಸಂಘ ಸ್ಥಾಪನೆ ಸೇರಿ ಸಹಕಾರ ಕ್ಷೇತ್ರದಲ್ಲಿ ಒಗ್ಗಟ್ಟು, ಸೇವಾ ಭಾವನೆ, ಸಹಿಷ್ಣುತೆ, ಉತ್ತಮ ವಾತಾವರಣ ಕಲ್ಪಿಸುವಲ್ಲಿ ಗ್ರಾಮಸ್ಥರ ಸಹಕಾರ ಉತ್ತಮವಾಗಿದ್ದು ಗ್ರಾಮದ ಅಭಿವೃದ್ಧಿ ಕಾರಣವಾಗಿದೆ ಎಂದು ಸಚಿವರು ಹೇಳಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ನಾಯಕತ್ವ ಹೇಗೆ ಪಡೆದುಕೊಳ್ಳಬೇಕು ಎಂಬುದನ್ನು ಎಂ.ವಿ. ಮೂಲಿಮನಿ ಅವರನ್ನು ಕಲಿತುಕೊಳ್ಳಬೇಕು. ಗ್ರಾಮದಲ್ಲಿ ರಚನಾತ್ಮಕ ಕಾರ್ಯಗಳನ್ನು ರವಿ ಮೂಲಿಮನಿ ಅವರು ಮುಂದುವರೆಸಿಕೊಡು ಹೋಗುತ್ತಿದ್ದಾರೆ ಎಂದು ಹೇಳಿದರು.

ಶಾಸಕ ಜಿ.ಟಿ. ಪಾಟೀಲ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ ಮಾತನಾಡಿದರು. ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ ಹೈನುಗಾರಿಕೆಗೆ ಸಾಲ ವಿತರಣೆ ಮಾಡಿದರು. ರಾಣೆಬೆನ್ನೂರು ಶಾಸಕ ಪ್ರಕಾಶ ಕೋಳಿವಾಡ ಫೋಟೊ ಅನಾವರಣಗೊಳಿಸಿದರು. ಮಾಜಿ ಸಚಿವ ಬಿ.ಆರ್. ಯಾವಗಲ್ಲ ರೈತರಿಗೆ ಮ್ಯಾಟ್ ವಿತರಣೆ ಮಾಡಿದರು. ಶಿಕ್ಷಣ ತಜ್ಞ ಜೆ.ಕೆ. ಜಮಾದಾರ ಸಂಸ್ಥೆ ನಡೆದು ಬಂದ ದಾರಿಯ ಕುರಿತು ಉಪನ್ಯಾಸ ನೀಡಿದರು.

ಸಹಕಾರ ರತ್ನ ಪುರಸ್ಕೃತರಾದ ಕೆ.ಎಲ್. ಪಾಟೀಲ, ಎಚ್.ಜಿ. ಹಿರೇಗೌಡರ, ಶಂಕ್ರಣ್ಣ ಮುನವಳ್ಳಿ, ರಾಜ್ಯೋತ್ಸವ ಪುರಸ್ಕೃತ ಡಾ. ಜಿ.ಬಿ. ಬೀಡನಾಳ, ಗುರಣ್ಣ ಬಳಗಾನೂರ ಅವರನ್ನು ಸನ್ಮಾನಿಸಲಾಯಿತು.

ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿ.ಪಂ ಮಾಜಿ ಅಧ್ಯಕ್ಷರಾದ ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಕೆಸಿಸಿ ಬ್ಯಾಂಕ್ ನಿರ್ದೇಶಕರಾದ ಮಲ್ಲಪ್ಪ ಕಲ್ಲುಗಿಡಿ, ಸಿ.ಬಿ. ದೊಡ್ಡಗೌಡ್ರು, ಜಮಾವೀತ ವುಲಾಮ ಪೀರಜಾದೆ ಅಧ್ಯಕ್ಷರು ಮೌಲಾನಾ ಇನಾಯತ್‌ವುಲ್ಲಾ, ಜಿ.ಪಂ ಮಾಜಿ ಸದಸ್ಯ ರೇವಣಪ್ಪ ಕೊಂಡಿಕೊಪ್ಪ, ಸಹಕಾರ ಸಂಘದ ಉಪನಿಬಂಧಕಿ ಎಸ್.ಎಸ್. ಕಬಾಡೆ, ಅಸಿಸ್ಟಂಟ್ ರಜಿಸ್ಟರ್ ಪುಷ್ಪಾ ಕಡಿವಾಳರ, ಗ್ರಾ.ಪಂ ಅಧ್ಯಕ್ಷೆ ತುಳಸಾ ಶ್ರೀನಿವಾಸ ತಿಮ್ಮನಗೌಡರ, ಉಪಾಧ್ಯಕ್ಷೆ ದ್ಯಾಮವ್ವ ಹನಮಪ್ಪ ಆರಟ್ಟಿ, ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಆರ್.ವಿ. ಅಗಸನಕೊಪ್ಪ, ಉಪಾಧ್ಯಕ್ಷ ಬಸಪ್ಪ ಮಲ್ಲಪ್ಪ ಭಾವಿಕಟ್ಟಿ, ಪ್ರಾಥಮಿಕ ಸಹಕಾರ ಸಂಘ ನಿ. ಅಧ್ಯಕ್ಷ ಡಿ.ಬಿ. ತಿರ್ಲಾಪೂರ ಹಾಗೂ ಉಪಾಧ್ಯಕ್ಷ ದೇವಪ್ಪ ಯಲ್ಲಪ್ಪ ಹುಲ್ಲೋಜಿ ಪಾಲ್ಗೊಂಡಿದ್ದರು. ಆರ್.ಎಂ. ಮೂಲಿಮನಿ ನಿರ್ವಹಿಸಿದರು.

## ಮಕ್ಕಳಿಗಿಂತ ದೊಡ್ಡ ಸಂಪತ್ತು ಇನ್ನೊಂದಿಲ್ಲ

▶▶ಮೊದಲನೇ ಪುಟದಿಂದ

ಸೇವಾ ಭಾರತಿ ಸಂಸ್ಥೆ ಮಾಡುತ್ತಿರುವ ಸೇವೆ ಅದ್ಭುತ ಸೇವೆ. ಭಗವಂತನ ಸೇವೆಗೆ ಮತ್ತೊಂದು ಸ್ವರೂಪವೇ ಈ ಸಂಸ್ಥೆಯ ಸೇವೆಯಾಗಿದೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ವಹಿಸಿದ್ದರು. ವೇದಿಕೆಯ ಮೇಲೆ ಬಿ.ಬಿ. ಅಸೂಟಿ, ಆಶಾ ಶೆಟ್ಟರ ಉಪಸ್ಥಿತರಿದ್ದರು. ಉಮಾ ಚನ್ನಪ್ಪನವರ ಪ್ರಾರ್ಥಿಸಿದರು, ಪ್ರಾ. ಮಾರುತಿ ಕಟ್ಟಿಮನಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನರಸಿಂಹ ಕಾಮಾರ್ತಿ ನಿರೂಪಿಸಿದರು. ಕಾರ್ಯದರ್ಶಿ ರಾಜೇಶ ಖಟವಟೆ ವಂದಿಸಿದರು. ಸಮಾರಂಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಬಸವರಾಜ ಸಂಶಿ, ಡಿ.ಐ. ಈರಗಾರ, ಸುಪರ್ಣಾ ಬ್ಯಾಹಟ್ಟಿ, ಕೇಂದ್ರದ ಆಡಳಿತ ಮಂಡಳಿಯ ಸದಸ್ಯರಾದ ನಾಗವೇಣಿ ಕಟ್ಟಿಮನಿ, ಗವಿಸಿದ್ಧಪ್ಪ ಕೊಣ್ಣೂರ, ಚನ್ನವೀರಪ್ಪ ಚನ್ನಪ್ಪನವರ, ಶಿವಕುಮಾರ ಸಣಕಲ್ಲ, ಲಲಿತಾಬಾಯಿ ಮೇರವಾಡೆ, ಅರುಣ ರಾಜಪುರೋಹಿತ ಸೇರಿದಂತೆ ಲುಕ್ಕಣಸಾಬ ರಾಜೋಳಿ, ಜಯರಾಜ ಮುಳಗುಂದ, ಪ್ರಮೋದ ಹಿರೇಮಠ, ಶ್ರೀಧರ ಕಾಂಬಳೆ, ಅಭಿಷೇಕ ಮಾಳೋದೆ, ಜ್ಯೋತಿ ಸಂಗಮದ ಮುಂತಾದವರಿದ್ದರು.



ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದ ಶ್ರೀ ಬನಶಂಕರಿ ದೇವಿ ದೇವಸ್ಥಾನದಲ್ಲಿ ಧನುರ್ಮಾಸದ ಚತುರ್ಥಿ ಪಲ್ಯದ ಹಬ್ಬದ ಪ್ರಯುಕ್ತ ದೇವಿ ಮೂರ್ತಿಗೆ 108 ತರಕಾರಿಗಳಿಂದ ಅಲಂಕರಿಸಿ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಗಿತ್ತು.

### ಪೊಲೀಸ್ ವಾಹನಗಳನ್ನು ಲೋಕಾರ್ಪಣೆಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ಜನಸ್ನೇಹಿ ಪೊಲೀಸ್ ವ್ಯವಸ್ಥೆ ಜಾರಿಯಾಗಲಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಪೊಲೀಸ್ ಇಲಾಖೆ ಅಪರಾಧಗಳು ನಡೆಯುವುದಕ್ಕೂ ಮುನ್ನ ಅವುಗಳ ಸಂಪೂರ್ಣ ನಿಯಂತ್ರಣಕ್ಕೆ ಮುಂದಾಗಬೇಕು. ಜೊತೆಗೆ ಜನಸ್ನೇಹಿ ಪೊಲೀಸ್ ವ್ಯವಸ್ಥೆ ಸಂಪೂರ್ಣ ಜಾರಿಯಾಗಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ಹೇಳಿದರು.

ಪೊಲೀಸ್ ಇಲಾಖೆಗೆ ಶಾಸಕರ ಪ್ರದೇಶ ಅಭಿವೃದ್ಧಿ ನಿಧಿಯಿಂದ ಮಂಜೂರಾಗಿರುವ ಪೊಲೀಸ್ ವಾಹನಗಳನ್ನು ಜಿಲ್ಲಾಡಳಿತ ಭವನದ ಆವರಣದಲ್ಲಿ ರವಿವಾರ ಲೋಕಾರ್ಪಣೆಗೊಳಿಸಿ ಸಚಿವರು ಮಾತನಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಎಸ್ ನೇಮಗೌಡ ಅವರು ಹೇಳಿದಂತೆ ಪೊಲೀಸ್ ಇಲಾಖೆಯ ತುರ್ತು ಈಆರ್‌ಎಸ್‌ಎಸ್ ಸೇವೆ 15 ನಿಮಿಷದಿಂದ 9 ನಿಮಿಷಕ್ಕೆ ಸೇವೆ ಒದಗಿಸುವ ಮಟ್ಟಿಗೆ ಇಲಾಖೆ ಕಾರ್ಯನಿರ್ವಹಿಸುತ್ತಿದೆ ಎಂದಿದ್ದಾರೆ, ಇಲಾಖೆಗೆ ಅಭಿನಂದನೆಗಳು ಎಂದರು.

ದೂರುಗಳು ನಿಮ್ಮ ಮೇಲೆ ಇರದಂತೆ ಪೊಲೀಸ್ ಇಲಾಖೆ ಪಾರದರ್ಶಕವಾಗಿ ಪ್ರಕರಣಗಳ ತನಿಖೆ ಕೈಗೊಳ್ಳಬೇಕು. ಗದಗ ಜಿಲ್ಲಾ ಪೊಲೀಸ್ ಸುಸಂಸ್ಕೃತ ಪೊಲೀಸ್ ಆಗಿದೆ ಎಂದು ಹೆಮ್ಮೆಯಿಂದ ಹೇಳಿದರು. ಪ್ರಕರಣಗಳು ಆಗದಂತೆ ಮುಂಜಾಗ್ರತೆಯಾಗಿ ನಿಗಾ ವಹಿಸಬೇಕು. ಗದಗ ಜಿಲ್ಲೆಯಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗಿದೆ. ಥರ್ಡ್ ಐ ಜಾರಿಯ ಮೂಲಕ ನಗರದಾದ್ಯಂತ ಸಿಸಿಟಿವಿ ಅಳವಡಿಸಿದ್ದರಿಂದ ಪ್ರಕರಣಗಳ ಭೇದಿಸಲು ಪೊಲೀಸ್ ಇಲಾಖೆಗೆ ಸಹಕಾರಿಯಾಗಿದೆ. ಗದಗ ಉತ್ತಮ ಪೊಲೀಸ್ ಇಲಾಖೆ ಎಂದು ಹೆಸರಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ, ಪ್ರಭುತ್ವವನ್ನು ಪ್ರಜೆಗಳ ಹತ್ತಿರ ತೆಗೆದುಕೊಂಡು ಹೋಗುವಲ್ಲಿ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕೆಂದು ಹೇಳಿದರು.




ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಪೊಲೀಸ್ ಇಲಾಖೆಗೆ ಶಾಸಕರ ಪ್ರದೇಶ ಅಭಿವೃದ್ಧಿ ನಿಧಿಯಿಂದ ವಾಹನಗಳನ್ನು ಒದಗಿಸಿದ್ದು, ಇಲಾಖೆಗೆ ತುಂಬಾ ಸಹಾಯಕವಾಗಿದೆ. ಸರ್ಕಾರದ ನಿಯಮಾನುಸಾರ 15 ವರ್ಷ ಮೀರಿದ ವಾಹನಗಳನ್ನು ಬಳಸುವಂತಿಲ್ಲ. ಹಾಗಾಗಿ ಇಲಾಖೆಗೆ ಇನ್ನೂ ಹೆಚ್ಚಿನ ವಾಹನಗಳ ಅಗತ್ಯ ಇದೆ ಎಂದು ತಿಳಿಸಿದರಲ್ಲದೆ, ಪೊಲೀಸ್ ಇಲಾಖೆ ಜನಸ್ನೇಹಿಯಾಗಿಸಲು ಇಲಾಖೆ ಅಧಿಕಾರಿಗಳು ಸಿದ್ಧರಾಗಿ, ಆ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿದ್ದೇವೆ ಎಂದು ತಿಳಿಸಿದರು.

ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ್ ಮಂದಾಲಿ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದ ಗೌಡ ಪಾಟೀಲ ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಡಿವೈಎಸ್‌ಪಿ ವಿದ್ಯಾನಂದ ನಾಯ್ಕ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

> ತುರ್ತು ಈಆರ್‌ಎಸ್‌ಎಸ್ ಸೇವೆ 9ರಿಂದ 5 ನಿಮಿಷದ ಒಳಗೆ ಸಾರ್ವಜನಿಕರಿಗೆ ತಲುಪಬೇಕು ಎಂದ ಸಚಿವ ಎಚ್.ಕೆ. ಪಾಟೀಲ, ಮೊನ್ನೆ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಗೃಹ ಸಚಿವರಾದ ಜಿ. ಪರಮೇಶ್ವರ್ ಅವರು ಗದಗ ಜಿಲ್ಲೆಯ ಥರ್ಡ್ ಐ ಯೋಜನೆಯ ಬಗ್ಗೆ ಪ್ರಶಂಸೆಯ ಮಾತುಗಳನ್ನಾಡಿದ್ದಾರೆ. ಇದು ಗದಗ ಜಿಲ್ಲಾ ಪೊಲೀಸರಿಗೆ ಹೆಮ್ಮೆ ತರುವ ಕಾರ್ಯವಾಗಿದೆ ಎಂದರು.

## ‘ಭೂ ಸುರಕ್ಷಾ’ ಯೋಜನೆಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಸರಕಾರ ಹೊಸದಾಗಿ ಜಾರಿ ಮಾಡಿರುವ ಭೂ ಸುರಕ್ಷಾ ಯೋಜನೆಗೆ ಶಾಸಕ ಡಾ. ಚಂದ್ರು ಲಮಾಣಿ ಸೋಮವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳ ವ್ಯಾಪ್ತಿಯಲ್ಲಿ ಬರುವ ಸುಮಾರು 150 ವರ್ಷಗಳ ಹಿಂದಿನ 27,53,334 ದಾಖಲೆಗಳನ್ನು ಸಾರ್ವಜನಿಕರಿಗೆ ತ್ವರಿತಗತಿಯಲ್ಲಿ ತಾವು ಇದ್ದ ಸ್ಥಳದಲ್ಲಿಯೇ ಭೂ ದಾಖಲೆಗಳನ್ನು ಪಡೆಯುವುದಕ್ಕಾಗಿ ಡಿಜಟಲೀಕರಣ ವ್ಯವಸ್ಥೆಯನ್ನು ಕಲ್ಪಿಸುವದಕ್ಕೆ ಇಂದು ಚಾಲನೆ ನೀಡಲಾಗಿದ್ದು, ಇದರಿಂದ ಹಳೆಯ, ದುಸ್ಥಿತಿಯಲ್ಲಿರುವ ಭೂ ದಾಖಲೆಗಳನ್ನು ಶಾಶ್ವತ ಡಿಜಿ ದಾಖಲೆಗಳಾಗಿ ಪರಿವರ್ತನೆ, ರೆಕಾರ್ಡ್ ರೂಂಗಳಿಂದ ಪಡೆದುಕೊಳ್ಳಲು ಇರುವ ತೊಂದರೆಗಳ ನಿವಾರಣೆ, ಹಳೆಯ ದಾಖಲೆಗಳ ಸಂರಕ್ಷಣೆ ಹಾಗೂ ಕಳುವಾಗಲು, ತಿದ್ದಲು ಅಸಾಧ್ಯ, ನೇರವಾಗಿ ನೀವೇ ಡಿಜಿಟಲ್ ಮಾಧ್ಯಮದಿಂದ ಭೂ ದಾಖಲೆಗಳನ್ನು ಪಡೆದುಕೊಳ್ಳುವ ಸೌಲಭ್ಯ, ನಿಮ್ಮ ದಾಖಲೆಗಳನ್ನು ನಿಮ್ಮ ಕೈಗೆ ತಲುಪಿಸುವ ಯೋಜನೆ ಇದಾಗಿದೆ.

ವಿಳಂಬ, ಅಡೆ-ತಡೆಗಳನ್ನು ಆಲಿಸಿ, ತ್ವರಿತ ಆಡಳಿತ ಸೇವೆಯನ್ನು ಒದಗಿಸುವ ಪ್ರಯತ್ನ ಇದಾಗಿದೆ. ಮುಂಬರುವ ದಿನಗಳಲ್ಲಿ ಜನತೆಗೆ ಇದು ಸಹಕಾರಿಯಾಗಲಿದೆ ಎಂದರು.

ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ಲಕ್ಷ್ಮೇಶ್ವರ ತಹಶೀಲ್ದಾರ ವಾಸುದೇವ ಸ್ವಾಮಿ, ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಪ.ಪಂ ಸದಸ್ಯರಾದ ಸಂದೀಪ ಕಪ್ಪತ್ತನವರ, ಗೂಳಪ್ಪ ಕರಿಗಾರ, ಬಿ.ಡಿ. ಪಲ್ಲೇದ, ಅಶೋಕ ವರವಿ, ವೀರಣ್ಣ ಅಂಗಡಿ ಮುಂತಾದವರು ಉಪಸ್ಥಿತರಿದ್ದರು.

### ಕೋಟಿ ಕೋಟಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಖಾಸಗಿ ಆಸ್ತಿಗಳನ್ನು ಮೊದಲು ಸೀಜ್ ಮಾಡಿ | ಶಾಸಕ ಡಾ.ಚಂದ್ರು ಲಮಾಣಿ ಅಸಮಾಧಾನ

# ಉಗ್ರಾಣಗಳಿಗೆ ಬೀಗಮುದ್ರೆ ಸಮಂಜಸವಲ್ಲ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರಿ ಸ್ವಾಮ್ಯದ ಕಚೇರಿಗಳ ಅಧೀನದಲ್ಲಿರುವ ರೈತರ ದವಸ-ದಾನ್ಯಗಳನ್ನು ಸಂಗ್ರಹಿಸಿರುವ ಗೋದಾಮುಗಳಿಗೆ ಬೀಗ ಹಾಕಿರುವದು ಎಷ್ಟು ಸೂಕ್ತ, ಮೊದಲು ಲಕ್ಷಾಂತರ ರೂ ತೆರಿಗೆ ಬಾಕಿ ಉಳಿಸಿಕೊಂಡಿರುವ ಖಾಸಗಿ ಮಾಲೀಕರ ಮೇಲೆ ಕ್ರಮ ತೆಗೆದುಕೊಳ್ಳಿ. ಇದು ಸರಕಾರದಿಂದ ಬರಬೇಕಾದ ಬಾಕಿಯಾಗಿದ್ದರಿಂದ ಹಂತ ಹಂತವಾಗಿ ವಸೂಲಿ ಮಾಡಲು ಅವಕಾಶವಿದೆ. ಅದನ್ನು ಬಿಟ್ಟು ಹೀಗೆ ಮಾಡಿರುವದು ಯೋಗ್ಯವಾದ ಕ್ರಮವಲ್ಲ ಎಂದು ಶಾಸಕ ಡಾ.ಚಂದ್ರು ಲಮಾಣಿ ಮುಖ್ಯಾಧಿಕಾರಿ ಮೇಲೆ ಗರಂ ಆದ ಘಟನೆ ನಡೆಯಿತು.

ಪಟ್ಟಣದಲ್ಲಿನ ಕರ್ನಾಟಕ ರಾಜ್ಯ ಉಗ್ರಾಣ ನಿಗಮದವರು ಕಳೆದ ಆರೇಳು ವರ್ಷಗಳಿಂದ ಪಟ್ಟಣದ ಪುರಸಭೆಗೆ ಪಾವತಿಸಬೇಕಾದ 14 ಲಕ್ಷ ರೂ ತೆರಿಗೆ ಪಾವತಿಸದ್ದರಿಂದ ಶನಿವಾರ ಮುಖ್ಯಾಧಿಕಾರಿ ಮಹೇಶ ಹಡಪದ ನೇತೃತ್ವದಲ್ಲಿ ಉಗ್ರಾಣಗಳಿಗೆ ಬೀಗ ಹಾಕಲಾಗಿತ್ತು. ವಿಷಯ ತಿಳಿದು ಸೋಮವಾರ ಉಗ್ರಾಣ ನಿಗಮಕ್ಕೆ ಶಾಸಕ ಡಾ.ಚಂದ್ರು ಲಮಾಣಿ ಭೇಟಿ ನೀಡಿ ಸರಕಾರಿ ಅಧೀನದ ಗೋದಾಮುಗಳಿಗೆ ಬೀಗ ಹಾಕಿರುವದಕ್ಕೆ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರನ್ನು ಪ್ರಶ್ನಿಸಿದರು.



ಗೋದಾಮಿನಲ್ಲಿ ಗೋದಿ, ಜೋಳ, ಮೆಕ್ಕೆಜೋಳ, ಹೆಸರು ಶೇಂಗಾ ಸೇರಿದಂತೆ ಸುಮಾರು 10 ಸಾವಿರ ಚೀಲಗಳಿದ್ದು, 500 ಕ್ವಿಂಟಲ್‌ನಷ್ಟು ಧಾನ್ಯಗಳನ್ನು ಇಲ್ಲಿ ರೈತರು ಸಂಗ್ರಹಿಸಿಟ್ಟಿದ್ದಾರೆ. ಹೀಗೆ ಸೀಜ್ ಮಾಡಿದರೆ ರೈತರ ದವಸ-ದಾನ್ಯಗಳಿಗೆ ಹಾನಿಯಾದರೆ ಯಾರು ಹೊಣೆ? ಸಂಬಂಧಪಟ್ಟ ಅಧಿಕಾರ ಜೊತೆಗೆ ಮಾತನಾಡಿ ಬಾಕಿ ಇರುವ ಹಣವನ್ನು ತುಂಬಿಸುವ ಪ್ರಯತ್ನ ಮಾಡುತ್ತೇನೆ. ಸರಕಾರಿ ಆಸ್ತಿ ಸೀಜ್ ಮಾಡುವ ಮೊದಲು ನಮಗೂ ತಿಳಿಸಬೇಕಿತ್ತು ಎಂದು ಹೇಳಿದರು.

ಈ ವೇಳೆ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧಿಕಾರಿಗಳೊಂದಿಗೆ ಅವರು ದೂರವಾಣಿ ಮೂಲಕ ಮಾತನಾಡಿ, ಪುರಸಭೆಯವರು ಸೀಜ್ ಮಾಡಿ ಮೂರು ದಿನಗಳಾಗಿದ್ದರೂ ಇನ್ನೂ ಸಹ ಯಾವುದೇ ಕ್ರಮ ತೆಗೆದುಕೊಂಡಿಲ್ಲವೇಕೆ ಎಂದು ಪ್ರಶ್ನಿಸಿದರಲ್ಲದೆ, ಕೂಡಲೇ ಅಧಿಕಾರಿಗಳು ಇದರ ಬಗ್ಗೆ ಕ್ರಮ ತೆಗೆದುಕೊಳ್ಳಿ, ಇಲ್ಲದಿದ್ದರೆ ಸಮಸ್ಯೆ ಎದುರಿಸಬೇಕಾದಿತು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಹಾಜರಿದ್ದರು. ಪುರಸಭೆ ಮಾಜಿ ಅಧ್ಯಕ್ಷ ಎಂ.ಆರ್. ಪಾಟೀಲ, ಬಸವರಾಜ ಚಕ್ರಸಾಲಿ, ವಿಜಯ ಬೂದಿಹಾಳ, ವಿಶಾಲ ಬಟಗುರ್ಕಿ, ವಿನಯ ಪಾಟೀಲ ಹಾಗೂ ಉಗ್ರಾಣ ನಿಗಮದ ಸಿಬ್ಬಂದಿಗಳು ಇದ್ದರು.

> ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ಪಟ್ಟಣದ ಉಗ್ರಾಣ ನಿಗಮದವರು 2019ರಿಂದ ಇಲ್ಲಿಯವರೆಗೆ ಪುರಸಭೆಗೆ ಪಾವತಿಸಬೇಕಾದ 14 ಲಕ್ಷಕ್ಕೂ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿದ್ದಾರೆ. ಈ ಬಗ್ಗೆ ಹಲವು ಬಾರಿ ನೋಟಿಸ್ ನೀಡಲಾಗಿದೆ ಮತ್ತು ಸ್ವತಃ ನಿಗಮದ ಕಚೇರಿಗೆ ತೆರಳಿ ಅಲ್ಲಿನ ಅಧಿಕಾರಿಗಳಿಗೆ ತೆರಿಗೆ ಪಾವತಿಸುವಂತೆ ತಿಳಿಸಿದ್ದೇನೆ. ಆದಾಗ್ಯೂ ಯಾವುದೇ ಸ್ಪಂದನೆ ಇಲ್ಲದ್ದರಿಂದ ಹಿರಿಯ ಅಧಿಕಾರಿಗಳ ಸೂಚನೆಯ ಮೇರೆಗೆ ಕಾನೂನಿನನ್ವಯ ನಿಗಮ ಗೂಡಾನ್‌ಗಳಿಗೆ ಬೀಗ ಹಾಕಲಾಗಿದೆ ಎಂದು ಶಾಸಕರಿಗೆ ತಿಳಿಸಿದರು.

## ಆಚರಣೆಗಳು ಸಮಾಜಮುಖಿಯಾಗಿರಲಿ



■ **ವಿಜಯಸಾಕ್ಷಿ ಸುದ್ದಿ, ರೋಣ**

ಜನ್ಮದಿನದ ಆಚರಣೆಗಳು ಸದಾಕಾಲ ಸಮಾಜಮುಖಿಯಾಗಿರಬೇಕು ಎಂದು ವೈದ್ಯ ಡಾ. ಎಸ್.ಬಿ. ಲಕ್ಕೋಳ ಹೇಳಿದರು.

ಅವರು ಸೋಮವಾರ ಪುರಸಭೆ ಸದಸ್ಯ, ಯುವ ಮುಖಂಡ ಸಂಗನಗೌಡ ಪಾಟೀಲರ ಜನ್ಮದಿನಾಚರಣೆ ನಿಮಿತ್ತ ಅಭಿಮಾನಿಗಳಿಂದ ಜರುಗಿದ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.

ಜನ್ಮದಿನಾಚರಣೆಗಳು ಅಡಂಬರದಿಂದ ಕೂಡಿರಬಾರದು. ಬದಲಾಗಿ ಸಮಾಜಕ್ಕೆ ಒಳಿತಾಗುವ ಆಚರಣೆಗಳಾಗಬೇಕು. ಇಂದು 200ಕ್ಕೂ ಹೆಚ್ಚು ಅಭಿಮಾನಿಗಳು ರಕ್ತದಾನ ಮಾಡಿರುವುದು ಒಳ್ಳೆಯ ಬೆಳವಣಿಗೆ. ಕಾರಣ, ಅನೇಕ ಜೀವಗಳಿಗೆ ಈ ರಕ್ತ ಅವಶ್ಯಕವಾಗಿರುತ್ತದೆ, ಇದರಿಂದ ನೂರಾರು ಕುಟುಂಬಗಳಿಗೆ ಒಳಿತಾಗುತ್ತದೆ ಎಂದರು.

ಗುಲಗಂಜಿ ಮಠದ ಗುರುಪಾದ ದೇವರು ಆಶೀರ್ವಚನ ನೀಡಿ, ರಕ್ತದಾನ ಅತ್ಯಂತ ಮಹತ್ವವುಳ್ಳದ್ದಾಗಿದ್ದು, ಅಭಿಮಾನಿಗಳು ಬೃಹತ್ ಪ್ರಮಾಣದಲ್ಲಿ ಪಾಲ್ಗೊಂಡಿರುವುದು ಸ್ವಾಗತಾರ್ಹವಾಗಿದೆ. ಜನ್ಮ ದಿನಾಚರಣೆಗಳು ಅರ್ಥಪೂರ್ಣವಾಗಿರಬೇಕು ಎನ್ನುವುದಕ್ಕೆ ರಕ್ತದಾನ ಶಿಬಿರ ಮಾದರಿಯಾಗಿದ್ದು, ಇದರಿಂದ ಅನೇಕರಿಗೆ ಒಳಿತಾಗಲಿದೆ ಎಂದರು.

ಮುತ್ತಣ್ಣ ಸಂಗಳದ, ರಾಜಣ್ಣ ಗಿರಡ್ಡಿ, ತೋಟಪ್ಪ ನವಲಗುಂದ, ರಾಜಣ್ಣ ಸುಂಕದ, ನವಲಗುಂದ ಸೇರಿದಂತೆ ಅನೇಕ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಅನುದಾನದ ಕೊರತೆಯಿಂದ 2 ವರ್ಷಗಳಿಂದಲೂ ಅರ್ಧಕ್ಕೇ ನಿಂತ ರಸ್ತೆ ಕಾಮಗಾರಿ

# ಧೂಳುಮಯ ರಸ್ತೆಗಿಲ್ಲ ಮುಕ್ತಿ

■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ತಾಲೂಕಿನ ಶಿಗ್ಲಿ-ಹೂವಿನಶಿಗ್ಲಿ ಮಾರ್ಗದ ತಾಲೂಕು ವ್ಯಾಪ್ತಿಯ ಕೇವಲ 1.5 ಕಿ.ಮೀ ರಸ್ತೆ ಕಾಮಗಾರಿ ಅನುದಾನದ ಕೊರತೆಯಿಂದ 2 ವರ್ಷಗಳಿಂದಲೂ ಅರ್ಧಕ್ಕೆ ನಿಂತಿದೆ. ಹಾಕಿರುವ ಜಲ್ಲಿಕಲ್ಲುಗಳು ರಸ್ತೆಯುದ್ದಕ್ಕೂ ಹರಡಿ ಸಂಪೂರ್ಣ ಹಾಳಾಗಿ ಧೂಳಿನಿಂದ ಕೂಡಿರುವ ಈ ರಸ್ತೆಯ ದುರಸ್ತಿಗೆ ಯಾರೂ ದಿಕ್ಕಿಲ್ಲದಂತಾಗಿರುವದು ವ್ಯವಸ್ಥೆಗೆ ಹಿಡಿದ ಕೈಗನ್ನಡಿ. 2 ವರ್ಷಗಳ ಹಿಂದೆ ಮಾಜಿ ಶಾಸಕ ರಾಮಣ್ಣ ಲಮಾಣಿ ತಮ್ಮ ಅಧಿಕಾರಾವಧಿಯ ಕೊನೆಯ ಕಾಲಘಟ್ಟದಲ್ಲಿ ಜಿಲ್ಲಾ ಪಂಚಾಯಿತಿಗೆ ಸೇರಿದ ಈ ರಸ್ತೆಗೆ 50 ಲಕ್ಷ ರೂ ಅನುದಾನ ತರುವಲ್ಲಿ ಯಶಸ್ವಿಯಾಗಿದ್ದರು. ಕಾಮಗಾರಿಯ ಗುತ್ತಿಗೆದಾರರು 800 ಮೀಟರ್ ರಸ್ತೆಗೆ ಮೋರಂ ಹಾಕಿ ಖಡೀಕರಣಕ್ಕೆ ರಸ್ತೆಯ ಬದಿ ಖಡಿ ಹಾಕಿದ್ದರು. ಏತನ್ಮಧ್ಯೆ ವಿಧಾನಸಭೆ ಚುನಾವಣೆ ಬಳಿಕ ಬದಲಾದ ಸರ್ಕಾರ ಕಾಮಗಾರಿ ಪೂರ್ಣಗೊಳ್ಳದ್ದರಿಂದ ಮೀಸಲಿಟ್ಟ ಅನುದಾನಕ್ಕೆ ಕೊಕ್ಕೆ ಹಾಕಿತು. ಇದರಿಂದ ಕಳೆದ 2 ವರ್ಷಗಳಿಂದ ರಸ್ತೆ ಕಾಮಗಾರಿ ಅರ್ಧಕ್ಕೆ ನಿಂತಿದೆ. ಅಲ್ಲದೇ ಗುತ್ತಿಗೆದಾರ ಖರ್ಚು ಮಾಡಿದ ಅಂದಾಜು 8-10 ಲಕ್ಷಕ್ಕೂ ಎಳ್ಳುನೀರು ಬಿಟ್ಟಂತಾಗಿರುವ ಬಗ್ಗೆ ಗುತ್ತಿಗೆದಾರರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.



ಮಳೆಗಾಲದಲ್ಲಿ ಕೆಸರು-ಉಳಿದಂತೆ ಧೂಳುಮಯವಾಗಿರುವ ಈ ರಸ್ತೆ ಅನಾಥವಾಗಿದೆ. ಶಿಗ್ಲಿಯಿಂದ ಹೂವಿನಶಿಗ್ಲಿ ಮಾರ್ಗವಾಗಿ ಯಲವಗಿ ರೇಲ್ವೆ ನಿಲ್ದಾಣ ಸಂಪರ್ಕಕ್ಕೆ ಈ ರಸ್ತೆ ಸಾಕಷ್ಟು ಅನಕೂಲವಾಗಿತ್ತು. ಅಲ್ಲದೇ ಲಕ್ಷ್ಮೇಶ್ವರ ಭಾಗದಿಂದ ಹೂವಿನಶಿಗ್ಲಿ ಮಠಕ್ಕೆ ಹೋಗುವವರು, ಅಲ್ಲಿಂದ ಲಕ್ಷ್ಮೇಶ್ವರ ಕಡೆಗೆ ಬರುವವರು ಕೊಂಕಣ ಸುತ್ತಿ ಮೈಲಾರಕ್ಕೆ ಹೋಗುವಂತೆ ಯಲವಗಿ ಮೂಲಕ ಸಂಚಾರ ಮಾಡುತ್ತಿದ್ದಾರೆ. ರಸ್ತೆ ದುರಸ್ಥಿಗೆ ಸಾರ್ವಜನಿಕರು, ಮಠಾಧೀಶರು ಸಂಬಂಧಪಟ್ಟವರಿಗೆ ಅನೇಕ ಬಾರಿ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ.

> ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಗೆ ಸೇರಿದ 1.5 ಕಿ.ಮೀ ರಸ್ತೆ ಮಾತ್ರ ಹಾಳಾಗಿದ್ದು, ಸವಣೂರ ತಾಲೂಕು ವ್ಯಾಪ್ತಿಗೆ ಸೇರಿದ 3-4 ಕಿ.ಮೀ ರಸ್ತೆ ಸುಸ್ಥಿತಿಯಲ್ಲಿದೆ. ಸಂಪೂರ್ಣ ಹಾಳಾಗಿರುವ ಈ ರಸ್ತೆಯ ಧೂಳಿನಿಂದ ಅಕ್ಕಪಕ್ಕದ ಜಮೀನುಗಳಲ್ಲಿನ ಬೆಳೆ ಹಾಳಾಗುತ್ತಿದೆ. 3 ದಿನ ನಡೆಯುವ ಹೂವಿನಶಿಗ್ಲಿ ಮಠದ ಜಾತ್ರೆಗೆ ನಿತ್ಯ ಸಾವಿರಾರು ಭಕ್ತರು ಸಂಚರಿಸುವುದರಿಂದ ಧೂಳು ಏಳದಂತೆ ನೀರಾದರೂ ಸಿಂಪಡಿಸುವ ಕಾರ್ಯವನ್ನು ಸಂಬಂಧಪಟ್ಟವರು ಮಾಡಿ ಪುಣ್ಯ ಕಟ್ಟಿಕೊಳ್ಳಿ.
>
> **– ಶಿವಾನಂದ ಕಟ್ಟಿಮನಿ. ಹೂವಿನಶಿಗ್ಲಿ.**

> ಅನುದಾನದ ಕೊರತೆಯಿಂದ ರಸ್ತೆ ಕಾಮಗಾರಿ 2 ವರ್ಷದಿಂದ ಅರ್ಧಕ್ಕೆ ನಿಂತಿದೆ. ಈ ಬಗ್ಗೆ ಹಿರಿಯ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಅನುದಾನ ಬಂದ ಕೂಡಲೇ ರಸ್ತೆ ಅಭಿವೃದ್ಧಿಪಡಿಸಲಾಗುವುದು.
>
> **-ಮಾರುತಿ ರಾಠೋಡ. ಜಿ.ಪಂ ರಾಇ ಎಇಇ.**



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka